ಸಂಪುಟ: 11 ಸಂಚಿಕೆ: 210 ಪುಟಗಳು: 4+2 ಬೆಲೆ: ₹ 3.00 ಶುಕ್ರವಾರ, ಸೆಪ್ಟೆಂಬರ್ 25, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 210 Pages : 4+2 Rate : 3.00 Friday, September 25, 2026 Gadag RNI No : KARKAN/2015/63412 E-mail: vijayasakshidaily@gmail.com Post Regn.No: GDG/72/2020-22


### ಬಡ ರೋಗಿಗಳಿಗೆ ಅವಧಿ ಮೀರಿದ ಮಾತ್ರೆ ವಿತರಣೆ ಆರೋಪ; ರೋಗಿಗಳ ಆಕ್ರೋಶ

# ನಮ್ಮ ಕ್ಲಿನಿಕ್‌ನಲ್ಲೇ ಎಕ್ಸ್‌ಪೈರಿ ಔಷಧಿ!

**ವಿಜಯಸಾಕ್ಷಿ ಸುದ್ದಿ, ಗದಗ**

ಬಡವರು ಹಾಗೂ ದುರ್ಬಲ ವರ್ಗದವರಿಗೆ ಉಚಿತ ಹಾಗೂ ಗುಣಮಟ್ಟದ ಆರೋಗ್ಯ ಸೇವೆ ಒದಗಿಸಬೇಕಾದ 'ನಮ್ಮ ಕ್ಲಿನಿಕ್'ನಲ್ಲೇ ಅವಧಿ ಮೀರಿದ ಔಷಧಿ ಪತ್ತೆಯಾಗಿರುವ ಆರೋಪ ಬೆಳಕಿಗೆ ಬಂದಿದೆ. ಗದಗ ನಗರದ ಬೆಟಗೇರಿಯ ನಮ್ಮ ಕ್ಲಿನಿಕ್‌ನಲ್ಲಿ ಮಹಿಳೆಯರ ಆರೋಗ್ಯ ಸಮಸ್ಯೆಗಾಗಿ ನೀಡಲಾಗುತ್ತಿದ್ದ ಔಷಧಿಗಳ ಬಾಕ್ಸ್‌ನಲ್ಲಿ ಅವಧಿ ಮುಗಿದ ಮಾತ್ರೆಗಳು ಪತ್ತೆಯಾಗಿದ್ದು, ರೋಗಿಗಳಲ್ಲಿ ಆತಂಕ ಹಾಗೂ ಆಕ್ರೋಶಕ್ಕೆ ಕಾರಣವಾಗಿದೆ.

ನಗರ ಪ್ರದೇಶದ ಜನರಿಗೆ, ಅದರಲ್ಲೂ ಬಡವರು ಹಾಗೂ ಕಡಿಮೆ ಆದಾಯದ ಕುಟುಂಬಗಳಿಗೆ ಅವರ ಮನೆ ಸಮೀಪದಲ್ಲೇ ವೈದ್ಯಕೀಯ ಸೇವೆ ಒದಗಿಸುವ ಉದ್ದೇಶದಿಂದ ಸರ್ಕಾರ 'ನಮ್ಮ ಕ್ಲಿನಿಕ್' ಯೋಜನೆ ಜಾರಿಗೊಳಿಸಿದೆ. ಸಾಮಾನ್ಯ ಕಾಯಿಲೆಗಳಿಗೆ ವೈದ್ಯಕೀಯ ಸಲಹೆ, ತಪಾಸಣೆ ಹಾಗೂ ಅಗತ್ಯ ಔಷಧಿಗಳನ್ನು ಉಚಿತವಾಗಿ ನೀಡುವುದು ಯೋಜನೆಯ ಪ್ರಮುಖ ಉದ್ದೇಶ. ಆದರೆ, ಇದೇ ವ್ಯವಸ್ಥೆಯಡಿ ವಿತರಿಸಲಾಗುತ್ತಿದ್ದ ಔಷಧಿಗಳಲ್ಲಿ ಅವಧಿ ಮೀರಿದ ಮಾತ್ರೆಗಳು ಪತ್ತೆಯಾಗಿರುವುದು ಔಷಧಿ ಸಂಗ್ರಹಣೆ, ಸ್ಟಾಕ್ ಪರಿಶೀಲನೆ ಹಾಗೂ ವಿತರಣಾ ವ್ಯವಸ್ಥೆಯ ಮೇಲೆಯೇ ಪ್ರಶ್ನೆ ಎತ್ತಿದೆ.







ಮಹಿಳೆಯರ ಆರೋಗ್ಯ ಸಮಸ್ಯೆಗೆ ನೀಡಲಾಗುತ್ತಿದ್ದ ಔಷಧಿಗಳ ಬಾಕ್ಸ್ ಪರಿಶೀಲಿಸಿದಾಗ ಅವಧಿ ಮುಗಿದ ಮಾತ್ರೆಗಳು ಪತ್ತೆಯಾಗಿವೆ ಎನ್ನಲಾಗಿದ್ದು, ವಿಷಯ ತಿಳಿಯುತ್ತಿದ್ದಂತೆ ರೋಗಿಗಳು ವೈದ್ಯರು ಹಾಗೂ ಸಿಬ್ಬಂದಿಯನ್ನು ತರಾಟೆಗೆ ತೆಗೆದುಕೊಂಡರು. ವೈದ್ಯರು ನೀಡಿದ ಮಾತ್ರೆ ಎಂದು ನಂಬಿ ಸೇವಿಸಿದರೆ, ಅದರ ಅವಧಿ ಮುಗಿದಿರುವುದು ಗೊತ್ತಾಗದಿದ್ದರೆ ಏನು ಗತಿ? ಮಾತ್ರೆ ಸೇವಿಸಿ ಯಾವುದೇ ಅನಾಹುತ ಸಂಭವಿಸಿದರೆ ಹೊಣೆ ಯಾರು? ಎಂದು ರೋಗಿಗಳು ಪ್ರಶ್ನಿಸಿದರು.

> ಅವಧಿ ಮುಗಿದ ಔಷಧಿ ನೀಡಿರುವುದು ತಪ್ಪಾಗಿದೆ. ಮುಂದೆ ಇಂತಹ ಘಟನೆ ನಡೆಯದಂತೆ ನೋಡಿಕೊಳ್ಳುತ್ತೇವೆ.
>
> – ಡಾ. ರಾಣಿ, ನಮ್ಮ ಕ್ಲಿನಿಕ್ ವೈದ್ಯೆ

ಕ್ಲಿನಿಕ್‌ಗೆ ಮಾಧ್ಯಮ ಪ್ರತಿನಿಧಿಗಳು ಭೇಟಿ ನೀಡಿದ ಸಂದರ್ಭದಲ್ಲಿ ಅವಧಿ ಮೀರಿದ ಔಷಧಿಗಳು ಕ್ಯಾಮೆರಾ ಕಣ್ಣಿಗೂ ಸೆರೆಯಾಗಿವೆ. ಈ ವೇಳೆ ಔಷಧಿ ವಿತರಣೆ ಕುರಿತು ಸಿಬ್ಬಂದಿ ಮತ್ತು ರೋಗಿಗಳ ನಡುವೆ ಮಾತಿನ ಚಕಮಕಿ ನಡೆದಿದ್ದು, ಪರಿಸ್ಥಿತಿ ಕೆಲಕಾಲ ಗೊಂದಲಮಯವಾಗಿತ್ತು ಎನ್ನಲಾಗಿದೆ.

### ಸ್ಟಾಕ್ ಪರಿಶೀಲನೆ ಆಗುತ್ತಿದೆಯೇ?

ಔಷಧಿ ವಿತರಿಸುವ ಮುನ್ನ ಅದರ ಎಕ್ಸ್‌ಪೈರಿ ದಿನಾಂಕ ಪರಿಶೀಲಿಸುವುದು ಅತ್ಯಗತ್ಯ. ಹೀಗಿರುವಾಗ ಅವಧಿ ಮೀರಿದ ಮಾತ್ರೆಗಳು ರೋಗಿಗಳಿಗೆ ವಿತರಿಸುವ ಹಂತಕ್ಕೆ ಬಂದಿದ್ದು ಹೇಗೆ ಎಂಬ ಪ್ರಶ್ನೆ ಇದೀಗ ಎದ್ದಿದೆ. ಔಷಧಿ ಪೂರೈಕೆಯ ಹಂತದಲ್ಲೇ ಸಮಸ್ಯೆ ಉಂಟಾಯಿತೇ? ಕ್ಲಿನಿಕ್‌ನಲ್ಲಿ ಔಷಧಿ ಸಂಗ್ರಹಣೆ ಹಾಗೂ ಸ್ಟಾಕ್ ಪರಿಶೀಲನೆ ಸಮರ್ಪಕವಾಗಿ ನಡೆಯುತ್ತಿದೆಯೇ? ಅವಧಿ ಮುಗಿಯುವ ಔಷಧಿಗಳನ್ನು ಪ್ರತ್ಯೇಕವಾಗಿ ಗುರುತಿಸಿ ವಿತರಣೆ ತಡೆಯುವ ವ್ಯವಸ್ಥೆ ಇದೆಯೇ ಎಂಬುದರ ಬಗ್ಗೆಯೂ ಪರಿಶೀಲನೆ ಅಗತ್ಯವಾಗಿದೆ.

ಪ್ರಕರಣದ ಕುರಿತು ವೈದ್ಯೆ ಡಾ. ರಾಣಿ ಅವರನ್ನು ಪ್ರಶ್ನಿಸಿದಾಗ, ಅವಧಿ ಮುಗಿದ ಔಷಧಿ ನೀಡಿರುವುದು ತಪ್ಪಾಗಿದೆ ಎಂದು ಒಪ್ಪಿಕೊಂಡಿದ್ದಾರೆ. ಮುಂದೆ ಇಂತಹ ಘಟನೆ ಮರುಕಳಿಸದಂತೆ ಎಚ್ಚರಿಕೆ ವಹಿಸುವುದಾಗಿ ತಿಳಿಸಿದ್ದಾರೆ.

ಸರ್ಕಾರಿ ಆಸ್ಪತ್ರೆಯ ಮೇಲೆ ನಂಬಿಕೆ ಇಟ್ಟು ಬರುವ ಬಡ ರೋಗಿಗಳಿಗೆ ನೀಡುವ ಔಷಧಿಯಲ್ಲೇ ಇಂತಹ ಲೋಪ ಕಂಡುಬಂದಿರುವುದು ಗಂಭೀರ ವಿಷಯ. ಈ ಪ್ರಕರಣದ ಕುರಿತು ಆರೋಗ್ಯ ಇಲಾಖೆ ಸಮಗ್ರ ತನಿಖೆ ನಡೆಸಿ, ಔಷಧಿ ಪೂರೈಕೆ, ಸಂಗ್ರಹಣೆ, ಸ್ಟಾಕ್ ನಿರ್ವಹಣೆ ಹಾಗೂ ವಿತರಣೆ ಪ್ರಕ್ರಿಯೆಯನ್ನು ಪರಿಶೀಲಿಸಬೇಕು. ನಿರ್ಲಕ್ಷ್ಯಕ್ಕೆ ಕಾರಣರಾದವರು ಕಂಡುಬಂದರೆ ಅವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ರೋಗಿಗಳು ಹಾಗೂ ಸ್ಥಳೀಯರು ಆಗ್ರಹಿಸಿದ್ದಾರೆ.

---

### ಪಿಎಸ್‌ಐ ರಿತ್ತಿ ನಿಯೋಜನೆಗೆ ಶ್ರೀರಾಮ ಸೇನೆ ವಿರೋಧ

## ಗಣೇಶ ವಿಸರ್ಜನೆಗೆ ಬಿಗಿ ಬಂದೋಬಸ್ತ್

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಗಣೇಶ ಮೂರ್ತಿ ವಿಸರ್ಜನೆಗೆ ದಿನಗಣನೆ ಆರಂಭವಾಗಿರುವ ಬೆನ್ನಲ್ಲೇ ಪೊಲೀಸ್ ಬಂದೋಬಸ್ತ್ ವಿಚಾರ ಮುನ್ನೆಲೆಗೆ ಬಂದಿದೆ. ವಿಸರ್ಜನೆ ಸಂದರ್ಭದಲ್ಲಿ ಯಾವುದೇ ಅಹಿತಕರ ಘಟನೆ ನಡೆಯದಂತೆ ಲಕ್ಷ್ಮೇಶ್ವರ ಹಾಗೂ ಶಿರಹಟ್ಟಿ ತಾಲೂಕಿನಲ್ಲಿ ಹೆಚ್ಚುವರಿ ಪೊಲೀಸ್ ಸಿಬ್ಬಂದಿ ನಿಯೋಜಿಸಬೇಕು. ಜತೆಗೆ ಪಿಎಸ್‌ಐ ಈರಪ್ಪ ರಿತ್ತಿ ಅವರನ್ನು ವಿಸರ್ಜನೆ ಬಂದೋಬಸ್ತ್ ಕರ್ತವ್ಯಕ್ಕೆ ನಿಯೋಜಿಸಬಾರದು ಎಂದು ಶ್ರೀರಾಮ ಸೇನೆ ತಾಲೂಕು ಘಟಕ ಆಗ್ರಹಿಸಿದೆ.

ಗುರುವಾರ ತಹಸೀಲ್ದಾರ್ ಕಚೇರಿಗೆ ಮನವಿ ಸಲ್ಲಿಸಿ ಮಾತನಾಡಿದ ಶ್ರೀರಾಮ ಸೇನೆ ತಾಲೂಕು ಅಧ್ಯಕ್ಷ ಈರಣ್ಣ ಪೂಜಾರ, ಲಕ್ಷ್ಮೇಶ್ವರ ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ಗಣೇಶ ಮೂರ್ತಿ ವಿಸರ್ಜನೆಗೆ ಈಗಾಗಲೇ ಇಲಾಖೆಯಿಂದ ಅನುಮತಿ ಪಡೆಯಲಾಗಿದೆ. ವಿಸರ್ಜನೆ ಸಂದರ್ಭದಲ್ಲಿ ಯಾವುದೇ ಗೊಂದಲಕ್ಕೆ ಅವಕಾಶವಾಗದಂತೆ ಪೊಲೀಸ್ ಇಲಾಖೆ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು. ಪಿಎಸ್‌ಐ ಈರಪ್ಪ ರಿತ್ತಿ ಅವರ ವಿರುದ್ಧ ಈ ಹಿಂದೆ ರೈತ ಹಾಗೂ ಹಿಂದೂಪರ ವಿಚಾರಗಳಿಗೆ ಸಂಬಂಧಿಸಿದಂತೆ ಪ್ರತಿಭಟನೆ ಮತ್ತು ಮನವಿಗಳನ್ನು ಸಲ್ಲಿಸಲಾಗಿದೆ ಎಂದು ಅವರು ಹೇಳಿದರು. ಶಿರಹಟ್ಟಿಯಲ್ಲಿ ನಡೆದ ಹೋರಾಟದ ವೇಳೆ 33 ಮಂದಿ ಹಿಂದೂ ಹಾಗೂ ಸಾಮಾಜಿಕ ಹೋರಾಟಗಾರರ ವಿರುದ್ಧ ಪ್ರಕರಣ ದಾಖಲಿಸಲಾಗಿದೆ ಎಂದು ಆರೋಪಿಸಿದರು.

ಅಲ್ಲದೇ, 2024ರ ದಸರಾ ಸಂದರ್ಭದಲ್ಲಿ ಗೋಸಾವಿ ಸಮಾಜದ ಮಹಿಳೆಯರು ಹಾಗೂ ಮಕ್ಕಳ ಮೇಲೆ ಲಾಠಿ ಪ್ರಹಾರ ನಡೆಸಲಾಗಿದೆ ಎಂಬ ಆರೋಪವೂ ರಿತ್ತಿ ಅವರ ವಿರುದ್ಧವಿದೆ. ಈ ಹಿನ್ನೆಲೆಯಲ್ಲಿ ಹಿಂದೂ ಸಂಘಟನೆಗಳು ಈ ಹಿಂದೆ ಹೋರಾಟ ನಡೆಸಿದ್ದವು ಎಂದು ತಿಳಿಸಿದರು. ಅಕ್ರಮ ಮರಳು ಸಾಗಣೆ, ಕಸಾಯಿಖಾನೆ ಹಾಗೂ ಇಸ್ಪೀಟ್ ಜೂಜಾಟ ಸೇರಿದಂತೆ ವಿವಿಧ ಅಕ್ರಮ ಚಟುವಟಿಕೆಗಳ ವಿರುದ್ಧವೂ ಸಂಘಟನೆಯಿಂದ ಈ ಹಿಂದೆ ಮನವಿ ಸಲ್ಲಿಸಲಾಗಿದೆ. ಈ ಎಲ್ಲ ವಿಚಾರಗಳ ಹಿನ್ನೆಲೆಯಲ್ಲಿ ಗಣೇಶ ವಿಸರ್ಜನೆಯಂತಹ ಸಂದರ್ಭದಲ್ಲಿ ಯಾವುದೇ ಗೊಂದಲ ಉಂಟಾಗದಂತೆ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಲಕ್ಷ್ಮೇಶ್ವರ ಹಾಗೂ ಶಿರಹಟ್ಟಿ ತಾಲೂಕಿನಲ್ಲಿ ಗಣೇಶ ಮೂರ್ತಿ ವಿಸರ್ಜನೆ ನಡೆಯುವ ಮಾರ್ಗಗಳು ಮತ್ತು ವಿಸರ್ಜನಾ ಸ್ಥಳಗಳಲ್ಲಿ ಅಗತ್ಯ ಪೊಲೀಸ್ ಸಿಬ್ಬಂದಿ ಹಾಗೂ ಅಧಿಕಾರಿಗಳನ್ನು ನಿಯೋಜಿಸಿ ಬಿಗಿ ಬಂದೋಬಸ್ತ್ ಕಲ್ಪಿಸಬೇಕು ಎಂದು ಮನವಿ ಮಾಡಿದರು. ಈ ವೇಳೆ ಹರೀಶ ಗೋಸಾವಿ, ಅಮಿತ್ ಗುಡಗೇರಿ, ಸೋಮು ತಂಡಗೇರ, ಅಭಿಷೇಕ ಉಮಚಗಿ, ಪ್ರೀತಂ ರಾಜೋಳಿ, ಸಾಗರ ಮೆಹರವಾಡೆ, ವಿಶ್ವಾಸ ಗೋಸಾವಿ, ಗೋಪಿ ಗೋಸಾವಿ, ರಾಹುಲ್ ಗೋಸಾವಿ, ವಿನೋದ ಗೋಸಾವಿ, ಸಂಜು ಗೋಸಾವಿ ಸೇರಿದಂತೆ ಹಲವರು ಇದ್ದರು. ತಹಸೀಲ್ದಾರ್ ಕಚೇರಿಯಲ್ಲಿ ಗ್ರೇಡ್-2 ತಹಸೀಲ್ದಾರ್ ಮಂಜುನಾಥ ಅಮಾಸಿ ಮನವಿ ಸ್ವೀಕರಿಸಿದರು.

> ಗಣೇಶ ವಿಸರ್ಜನೆ ವೇಳೆ ಯಾವುದೇ ಅಹಿತಕರ ಘಟನೆ ನಡೆಯದಂತೆ ಮುನ್ನೆಚ್ಚರಿಕೆ ಅಗತ್ಯ. ಪಿಎಸ್‌ಐ ಈರಪ್ಪ ರಿತ್ತಿ ಅವರನ್ನು ಬಂದೋಬಸ್ತ್ ಕರ್ತವ್ಯಕ್ಕೆ ನಿಯೋಜಿಸದೆ, ಲಕ್ಷ್ಮೇಶ್ವರ ಹಾಗೂ ಶಿರಹಟ್ಟಿ ತಾಲೂಕಿಗೆ ಹೆಚ್ಚುವರಿ ಪೊಲೀಸ್ ಬಂದೋಬಸ್ತ್ ಕಲ್ಪಿಸಬೇಕು.
>
> – ಈರಣ್ಣ ಪೂಜಾರ, ಶ್ರೀರಾಮ ಸೇನೆ ತಾಲೂಕು ಅಧ್ಯಕ್ಷ

---

### ಅ.23ಕ್ಕೆ ಮತದಾನ; ಚುನಾವಣಾ ಅಕ್ರಮಗಳಿಗೆ ಕಡಿವಾಣ ಹಾಕಲು ಡಿಸಿ ಖಡಕ್ ಸೂಚನೆ

# ಎಂಎಲ್‌ಸಿ ಚುನಾವಣೆ: ನೀತಿ ಸಂಹಿತೆ ಜಾರಿಗೊಳಿಸಿ

**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಪಶ್ಚಿಮ ಪದವೀಧರ ಮತಕ್ಷೇತ್ರದ ದ್ವೈವಾರ್ಷಿಕ ಚುನಾವಣೆ-2026ಕ್ಕೆ ದಿನಾಂಕ ನಿಗದಿಯಾಗಿದ್ದು, ಜಿಲ್ಲಾದ್ಯಂತ ಮಾದರಿ ನೀತಿ ಸಂಹಿತೆಯನ್ನು ಕಟ್ಟುನಿಟ್ಟಾಗಿ ಪಾಲಿಸುವುದರ ಜತೆಗೆ ಯಾವುದೇ ಚುನಾವಣಾ ಅಕ್ರಮಗಳಿಗೆ ಅವಕಾಶ ನೀಡಬಾರದು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಅಧಿಕಾರಿಗಳಿಗೆ ಸೂಚಿಸಿದರು.



ನಗರದ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಬುಧವಾರ ಅಧಿಕಾರಿಗಳು ಹಾಗೂ ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ನಡೆದ ಕರ್ನಾಟಕ ಪಶ್ಚಿಮ ಪದವೀಧರ ಮತಕ್ಷೇತ್ರದ ಚುನಾವಣೆಯ ಮಾದರಿ ನೀತಿ ಸಂಹಿತೆ ಪಾಲನೆ ಕುರಿತ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಭಾರತ ಚುನಾವಣಾ ಆಯೋಗ ಪ್ರಕಟಿಸಿರುವ ವೇಳಾಪಟ್ಟಿಯಂತೆ ಸೆ.29ರಂದು ಚುನಾವಣಾ ಅಧಿಸೂಚನೆ ಪ್ರಕಟವಾಗಲಿದೆ. ಅ.6ರಂದು ನಾಮಪತ್ರ ಸಲ್ಲಿಕೆಗೆ ಕೊನೆಯ ದಿನವಾಗಿದ್ದು, ಅ.7ರಂದು ನಾಮಪತ್ರಗಳ ಪರಿಶೀಲನೆ ನಡೆಯಲಿದೆ. ಅ.9ರಂದು ಉಮೇದುವಾರಿಕೆ ಹಿಂಪಡೆಯಲು ಕೊನೆಯ ದಿನವಾಗಿದೆ.

ಅ.23ರಂದು ಬೆಳಗ್ಗೆ 8ರಿಂದ ಸಂಜೆ 4ರವರೆಗೆ ಮತದಾನ ನಡೆಯಲಿದ್ದು, ಅ.27ರಂದು ಮತಗಳ ಎಣಿಕೆ ನಡೆಯಲಿದೆ. ಅ.31ರಂದು ಸಂಪೂರ್ಣ ಚುನಾವಣಾ ಪ್ರಕ್ರಿಯೆ ಪೂರ್ಣಗೊಳ್ಳಲಿದೆ ಎಂದು ಜಿಲ್ಲಾಧಿಕಾರಿ ಮಾಹಿತಿ ನೀಡಿದರು. ಅಪರ ಜಿಲ್ಲಾಧಿಕಾರಿ ಡಾ. ದುರಗೇಶ ಕೆ.ಆರ್. ಮಾತನಾಡಿ, ಕರ್ನಾಟಕ ಪಶ್ಚಿಮ ಪದವೀಧರ ಮತಕ್ಷೇತ್ರದ ಚುನಾವಣೆಗೆ ಗದಗ ಜಿಲ್ಲೆಯಲ್ಲಿ ಒಟ್ಟು 23 ಮತದಾನ ಕೇಂದ್ರಗಳನ್ನು ಸ್ಥಾಪಿಸಲಾಗುವುದು. ಜಿಲ್ಲೆಯಲ್ಲಿ 12,726 ಪುರುಷರು ಹಾಗೂ 7,353 ಮಹಿಳೆಯರು ಸೇರಿದಂತೆ ಒಟ್ಟು 20,079 ಪದವೀಧರ ಮತದಾರರು ನೋಂದಾಯಿತರಾಗಿದ್ದಾರೆ ಎಂದು ಮಾಹಿತಿ ನೀಡಿದರು.

ಚುನಾವಣೆ ಘೋಷಣೆಯಾದ ಹಿನ್ನೆಲೆಯಲ್ಲಿ ಸೆ.22ರಿಂದಲೇ ಜಿಲ್ಲೆಯಲ್ಲಿ ಮಾದರಿ ನೀತಿ ಸಂಹಿತೆ ಜಾರಿಯಲ್ಲಿದೆ. ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ರಾಜಕೀಯ ಪಕ್ಷಗಳ ಮುಖಂಡರ ಭಾವಚಿತ್ರ ಹೊಂದಿರುವ ಬಂಟಿಂಗ್, ಬ್ಯಾನರ್, ಪೋಸ್ಟರ್ ಸೇರಿದಂತೆ ಪ್ರಚಾರ ಸಾಮಗ್ರಿಗಳನ್ನು ತೆರವುಗೊಳಿಸುವ ಕಾರ್ಯವನ್ನು 24 ಗಂಟೆಯೊಳಗೆ ಪೂರ್ಣಗೊಳಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಈಗಾಗಲೇ ಸೂಚಿಸಲಾಗಿದೆ ಎಂದು ಜಿಲ್ಲಾಧಿಕಾರಿ ತಿಳಿಸಿದರು.

ಚುನಾವಣಾ ಪ್ರಕ್ರಿಯೆ ಸುಗಮವಾಗಿ ನಡೆಯಲು ಅಧಿಕಾರಿಗಳು ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಬೇಕು. ಯಾವುದೇ ರೀತಿಯ ಚುನಾವಣಾ ಅಕ್ರಮಗಳಿಗೆ ಅವಕಾಶ ನೀಡದಂತೆ ಎಚ್ಚರಿಕೆ ವಹಿಸಬೇಕು. ಮತದಾರರ ಜಾಗೃತಿ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಹಮ್ಮಿಕೊಳ್ಳುವ ಮೂಲಕ ಮತದಾನ ಪ್ರಮಾಣ ಹೆಚ್ಚಿಸಲು ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮುಕುಲ್ ಜೈನ್ ಮಾತನಾಡಿ, ಮಾದರಿ ನೀತಿ ಸಂಹಿತೆ ಜಾರಿಯಲ್ಲಿರುವ ಹಿನ್ನೆಲೆಯಲ್ಲಿ ಚುನಾವಣಾ ಆಯೋಗದ ನಿರ್ದೇಶನದಂತೆ ಮತದಾರರಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಹಮ್ಮಿಕೊಳ್ಳಬೇಕು. ವಿಶೇಷವಾಗಿ ಮತದಾನದಿಂದ ದೂರ ಉಳಿಯುವ ಸಾಧ್ಯತೆ ಇರುವ ಮತದಾರರನ್ನು ಪ್ರೇರೇಪಿಸಿ, ಚುನಾವಣಾ ಪ್ರಕ್ರಿಯೆಯಲ್ಲಿ ತಪ್ಪದೇ ಭಾಗವಹಿಸುವಂತೆ ಕ್ರಮ ಕೈಗೊಳ್ಳಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

> ಚುನಾವಣಾ ಪ್ರಕ್ರಿಯೆಯನ್ನು ಸುಗಮ, ಪಾರದರ್ಶಕ ಹಾಗೂ ಶಾಂತಿಯುತವಾಗಿ ನಡೆಸಲು ಸಂಬಂಧಿಸಿದ ಅಧಿಕಾರಿಗಳು ಅಗತ್ಯ ಸಿದ್ಧತೆ ಕೈಗೊಳ್ಳಬೇಕು. ಚುನಾವಣಾ ಆಯೋಗದ ನಿರ್ದೇಶನಗಳು ಹಾಗೂ ಮಾದರಿ ನೀತಿ ಸಂಹಿತ ಯನ್ನು ಯಾವುದೇ ಲೋಪ ವಿಲ್ಲದೆ ಜಾ-ರಿಗೊಳಿಸಬೇಕು."
>
> – ಸಿ.ಎನ್. ಶ್ರೀಧರ, ಜಿಲ್ಲಾಧಿಕಾರಿ

ಸಭೆಯಲ್ಲಿ ಉಪವಿಭಾಗಾಧಿಕಾರಿ ಗಂಗಪ್ಪ ಎಂ., ಆಹಾರ ಇಲಾಖೆ ಉಪನಿರ್ದೇಶಕ ಎಂ.ಎಸ್. ಪಾಟೀಲ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೊಟೂರ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಡಾ. ನಂದಾ ಹಣಬರಟ್ಟಿ, ಜಿಲ್ಲಾ ಪಂಚಾಯಿತಿ ಮುಖ್ಯ ಯೋಜನಾಧಿಕಾರಿ ಎ.ಎ. ಕಂಬಾಳಿಮಠ, ಶ್ರೀನಿವಾಸ ಮೂರ್ತಿ, ವಸಂತ ಮಡ್ಲೂರ, ಎಂ.ಎಂ. ತುಂಬರಮಟ್ಟಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.

---

# ವೃದ್ಧನ ಮೇಲೆ ಹರಿದ ಟಿಪ್ಪರ್; ಕಾಲು ಜಜ್ಜಿದರೂ ಪಾರು!

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಶಿಗ್ಲಿ ಕ್ರಾಸ್‌ನಲ್ಲಿ ಗುರುವಾರ ಭೀಕರ ಅಪಘಾತ ಸಂಭವಿಸಿದ್ದು, ರಸ್ತೆ ದಾಟುತ್ತಿದ್ದ ವೃದ್ಧನ ಮೇಲೆ ಟಿಪ್ಪರ್ ಹರಿದಿದೆ. ಟಿಪ್ಪರ್‌ನ ಚಕ್ರಕ್ಕೆ ಸಿಲುಕಿದ ಪರಿಣಾಮ ವೃದ್ಧನ ಕಾಲು ಗಂಭೀರವಾಗಿ ಜಜ್ಜಿದ್ದು, ಅದೃಷ್ಟವಶಾತ್ ಪ್ರಾಣಾಪಾ ಯದಿಂದ ಪಾರಾಗಿದ್ದಾರೆ.



ಪಟ್ಟಣದ ನಿವಾಸಿ ರಾಮಣ್ಣ ಮಲ್ಲಪ್ಪ ಹುರಕನವರ (58) ಅವರು ಶಿಗ್ಲಿ ಕ್ರಾಸ್ ದಾಟುತ್ತಿದ್ದ ವೇಳೆ ಟಿಪ್ಪರ್ ಹರಿದಿದೆ. ಅಪಘಾತದ ತೀವ್ರತೆಗೆ ಅವರ ಕಾಲಿಗೆ ಗಂಭೀರ ಗಾಯವಾಗಿದ್ದು, ಸ್ಥಳದಲ್ಲಿದ್ದ ಸಾರ್ವಜನಿಕರು ಆತಂಕಕ್ಕೊಳಗಾದರು. ಕೂಡಲೇ ಗಾಯಾಳುವನ್ನು ಸರ್ಕಾರಿ ಆಸ್ಪತ್ರೆಗೆ ದಾಖಲಿಸಿ ಪ್ರಾಥಮಿಕ ಚಿಕಿತ್ಸೆ ನೀಡಲಾಯಿತು. ಬಳಿಕ ಹೆಚ್ಚಿನ ಚಿಕಿತ್ಸೆಗಾಗಿ ಜಿಲ್ಲಾಸ್ಪತ್ರೆಗೆ ರವಾನಿಸಲಾಗಿದೆ.ಘಟನೆಯ ಬಳಿಕ ಪೊಲೀಸರು ಟಿಪ್ಪರ್ ಹಾಗೂ ಚಾಲಕನನ್ನು ವಶಕ್ಕೆ ಪಡೆದುಕೊಂಡು ಪ್ರಕರಣ ದಾಖಲಿಸಿಕೊಂಡಿದ್ದಾರೆ. ಚಾಲಕನ ನಿರ್ಲಕ್ಷ್ಯ ಹಾಗೂ ಅಜಾಗರೂಕ ಚಾಲನೆಯೇ ಅಪಘಾತಕ್ಕೆ ಕಾರಣ ಎಂದು ಸ್ಥಳೀಯರು ಆರೋಪಿಸಿದ್ದಾರೆ.

**ಭಾರಿ ವಾಹನಗಳ ವೇಗಕ್ಕೆ ಬ್ರೇಕ್ ಯಾವಾಗ?**

ಪಟ್ಟಣದಲ್ಲಿ ಮರಳು, ಮಣ್ಣು, ಜಲ್ಲಿ, ಎಂ-ಸ್ಯಾಂಡ್ ಸೇರಿದಂತೆ ವಿವಿಧ ಸರಕು ಸಾಗಿಸುವ ಲಾರಿ ಹಾಗೂ ಟಿಪ್ಪರ್‌ಗಳ ಸಂಚಾರ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ. ವೇಗವಾಗಿ ಸಂಚರಿಸುವ ಭಾರಿ ವಾಹನಗಳಿಂದ ಪಾದಚಾರಿಗಳು, ದ್ವಿಚಕ್ರ ವಾಹನ ಸವಾರರು ಹಾಗೂ ಸಾರ್ವಜನಿಕರು ಆತಂಕದಲ್ಲೇ ಸಂಚರಿಸುವಂತಾಗಿದೆ. ಪೊಲೀಸ್, ಕಂದಾಯ ಹಾಗೂ ಪ್ರಾದೇಶಿಕ ಸಾರಿಗೆ ಇಲಾಖೆ ಅಧಿಕಾರಿಗಳು ಜಂಟಿಯಾಗಿ ತಪಾಸಣೆ ನಡೆಸಿ ನಿಯಮ ಉಲ್ಲಂಘಿಸುವ ವಾಹನಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂಬುದು ಸಾರ್ವಜನಿಕರ ಆಗ್ರಹವಾಗಿದೆ.

> ಜನನಿಬಿಡ ಪ್ರದೇಶಗಳಲ್ಲಿ ಭಾರಿ ವಾಹನಗಳ ಅತಿವೇಗದ ಸಂಚಾರಕ್ಕೆ ಕಡಿವಾಣ ಹಾಕಬೇಕು. ಓವರ್‌ಲೋಡ್, ಅಜಾಗರೂಕ ಚಾಲನೆ ಹಾಗೂ ಚಾಲನೆ ವೇಳೆ ಮೊಬೈಲ್ ಬಳಕೆ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಂಡು ಸಾರ್ವಜನಿಕರ ಜೀವ ರಕ್ಷಿಸಬೇಕು.
>
> – ಚನ್ನಪ್ಪ ಜಗಲಿ, ತಾಪಂ ಮಾಜಿ ಸದಸ್ಯ

---

### ಅ.2, 3ರಂದು ಗದಗದಲ್ಲಿ ಎರಡು ದಿನಗಳ ಕಾರ್ಯಾಗಾರ

# ಪಂಚಮಸಾಲಿ ಯುವಶಕ್ತಿಗೆ ಭವಿಷ್ಯ ನಿರ್ಮಾಣದ ಪಾಠ!

**ವಿಜಯಸಾಕ್ಷಿ ಸುದ್ದಿ, ಗದಗ**

ವೀರಶೈವ-ಲಿಂಗಾಯತ ಪಂಚಮಸಾಲಿ ಸಮಾಜದ ಯುವಜನರ ಸರ್ವತೋಮುಖ ಬೆಳವಣಿಗೆ ಹಾಗೂ ಉಜ್ವಲ ಭವಿಷ್ಯ ರೂಪಿಸುವ ಉದ್ದೇಶದಿಂದ ಜಿಲ್ಲಾ ಯುವ ಘಟಕದ ವತಿಯಿಂದ 'ಯುವಶಕ್ತಿ-ಭವಿಷ್ಯ ನಿರ್ಮಾಣ' ಹೆಸರಿನ ಎರಡು ದಿನಗಳ ಕಾರ್ಯಾಗಾರವನ್ನು ಅಕ್ಟೋಬರ್ 2 ಹಾಗೂ 3ರಂದು ನಗರದ ರಾಜೀವ್ ಗಾಂಧಿ ನಗರದಲ್ಲಿರುವ ವಿಜಯ ಲಲಿತಕಲಾ ಸಂಸ್ಥೆಯಲ್ಲಿ ಆಯೋಜಿಸಲಾಗಿದೆ ಎಂದು ಘಟಕದ ರಾಜ್ಯಾಧ್ಯಕ್ಷ ಕೊಟ್ರೇಶ ಕಿಚಡಿ ತಿಳಿಸಿದರು.




ನಗರದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾರ್ಯಾಗಾರದಲ್ಲಿ ಪಾಲ್ಗೊಳ್ಳುವವರು ಕಡ್ಡಾಯವಾಗಿ ಆನ್‌ಲೈನ್ ಮೂಲಕ ನೋಂದಣಿ ಮಾಡಿಕೊಳ್ಳಬೇಕು. ಸಮಾಜದ ಜನಪ್ರತಿನಿಧಿಗಳಾದ ಸಿ.ಸಿ. ಪಾಟೀಲ, ಕಳಕಪ್ಪ ಬಂಡಿ, ಅರವಿಂದ ಬೆಲ್ಲದ, ಶಂಕರಪಾಟೀಲ ಮುನೇನಕೊಪ್ಪ, ಲಕ್ಷ್ಮಿ ಹೆಬ್ಬಾಳಕರ, ಬಸವಗೌಡ ಪಾಟೀಲ ಯತ್ನಾಳ, ವಿಜಯಾನಂದ ಕಾಶಪ್ಪನವರ ಹಾಗೂ ವಿನಯ ಕುಲಕರ್ಣಿ ಸೇರಿದಂತೆ ಹಲವು ಗಣ್ಯರು ಭಾಗವಹಿಸಲಿದ್ದಾರೆ ಎಂದರು.

ಯುವಜನರಲ್ಲಿ ಜೀವನ ಕೌಶಲ ಮತ್ತು ನಾಯಕತ್ವ ಗುಣ ಬೆಳೆಸುವುದು, ವೃತ್ತಿ ಮಾರ್ಗದರ್ಶನ, ಉದ್ಯೋಗ ಹಾಗೂ ಉನ್ನತ ಶಿಕ್ಷಣದ ಅವಕಾಶಗಳ ಕುರಿತು ಮಾಹಿತಿ, ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧತೆ, ಕೌಶಲಾಭಿವೃದ್ಧಿ ಹಾಗೂ ಜೀವನೋಪಾಯ, ಉದ್ಯಮಶೀಲತೆ, ಡಿಜಿಟಲ್ ತಂತ್ರಜ್ಞಾನ ಮತ್ತು ಕೃತಕ ಬುದ್ಧಿಮತ್ತೆ (ಎಐ) ಕುರಿತು ಅರಿವು ಮೂಡಿಸುವುದರ ಜತೆಗೆ ಸಮಾಜಸೇವೆಯ ಮಹತ್ವದ ಕುರಿತು ತರಬೇತಿ ನೀಡಲಾಗುತ್ತದೆ ಎಂದು ಹೇಳಿದರು.

ರಾಜ್ಯದಾದ್ಯಂತ ಈಗಾಗಲೇ 170 ಕಾರ್ಯಾಗಾರಗಳನ್ನು ನಡೆಸಲಾಗಿದೆ. ಪ್ರತಿವರ್ಷ ಒಂದೊಂದು ಜಿಲ್ಲೆಯಲ್ಲಿ ಕಾರ್ಯಾಗಾರ ಆಯೋಜಿಸಲಾಗುತ್ತಿದ್ದು, ಯೋಗ, ಸಾಂಸ್ಕೃತಿಕ ಕಾರ್ಯಕ್ರಮ, ಧಾರ್ಮಿಕ ಬದ್ಧತೆ ಹಾಗೂ ಪಂಚಮಸಾಲಿ ಸಮಾಜದ ಕುರಿತ ಜಾಗೃತಿಗೂ ಆದ್ಯತೆ ನೀಡಲಾಗುತ್ತಿದೆ. ಯುವಜನರು ಸನ್ಮಾರ್ಗದಲ್ಲಿ ನಡೆದು ಮೌಲ್ಯಯುತ ಬದುಕು ಕಟ್ಟಿಕೊಳ್ಳಲು ಕಾರ್ಯಾಗಾರ ನೆರವಾಗಲಿದೆ ಎಂದು ಕೊಟ್ರೇಶ ಕಿಚಡಿ ಹೇಳಿದರು.

ಘಟಕದ ಜಿಲ್ಲಾಧ್ಯಕ್ಷ ಸಂತೋಷ ಅಕ್ಕಿ ಮಾತನಾಡಿ, ವೀರಶೈವ-ಲಿಂಗಾಯತ ಪಂಚಮಸಾಲಿ ಸಂಘವು ಹಳೆಯ ಸಂಘಟನೆಗಳಲ್ಲಿ ಒಂದಾಗಿದ್ದು, ಸಮಾಜವು ರಾಜ್ಯದಲ್ಲಿ ಹೆಚ್ಚಿನ ಜನಸಂಖ್ಯೆ ಹೊಂದಿದೆ. 2014ರಲ್ಲಿ ಗದಗ ಜಿಲ್ಲೆಯಲ್ಲಿ ಕಾರ್ಯಾಗಾರ ನಡೆದಿತ್ತು. ಈ ಬಾರಿ ವಿವಿಧ ಕ್ಷೇತ್ರಗಳ ತಜ್ಞರು ಯುವಜನರಿಗೆ ಮಾರ್ಗದರ್ಶನ ನೀಡಲಿದ್ದಾರೆ. ಉದ್ಯೋಗ ದೊರೆಯುವವರೆಗೆ ಅಗತ್ಯ ನೆರವು ನೀಡುವ ಉದ್ದೇಶವೂ ಇದೆ ಎಂದು ತಿಳಿಸಿದರು.

ಮಹಿಳಾ ಘಟಕದ ಅಧ್ಯಕ್ಷೆ ವಸಂತಾ ಹುಲ್ಲತ್ತಿ, ಈರಣ್ಣ ಕರಿಬಿಷ್ಠಿ, ವಿ. ಮರಿಗೌಡರ, ಮಂಜುನಾಥ, ಶಿವಾನಂದ ಪಲ್ಲೇದ, ಶೇಖಣ್ಣ, ನಾಗರಾಜ ಮಾಗಡಿ ಹಾಗೂ ಮಂಗಳಾ ಉಪಸ್ಥಿತರಿದ್ದರು.

### ಉತ್ತರ ಕರ್ನಾಟಕದ ಕೃಷಿ ಬದುಕಿನೊಂದಿಗೆ ಬೆಸೆದುಕೊಂಡಿರುವ ವಿಶಿಷ್ಟ ಜಾನಪದ ಪರಂಪರೆ

# ಮಳೆ–ಬೆಳೆಯ ದೈವ ಜೋಕುಮಾರದೇವರು

**ಜೋಕುಮಾರ ಬಂದಾ ನೋ ಜಾಣವ್ವ ಮಳೆ ಬೆಳೆ ತಂದಾ ನೋ ಕೃಷಿಕರಿಗೆ ಮನೆಮನೆಗೆ ಉದೋ ಉದೋ ಅನ್ನಿರವ್ವ**



ಉತ್ತರ ಕರ್ನಾಟಕದ ಹಳ್ಳಿಗಳಲ್ಲಿ ಅನಂತನ ಹುಣ್ಣಿಮೆಯ ಸಂದರ್ಭದಲ್ಲಿ ಮೊಳಗುವ ಈ ಜನಪದ ತ್ರಿಪದಿಗಳು, ಜೋಕುಮಾರದೇವರ ಆರಾಧನೆಯ ಜಾನಪದ ಸೊಗಡನ್ನು ಸಾರುತ್ತವೆ. ಸೆ.26ರಂದು ಆಚರಿಸಲಾಗುವ ಜೋಕುಮಾರ ಹಬ್ಬವು ಪ್ರಕೃತಿ, ಮಳೆ, ಬೆಳೆ ಹಾಗೂ ಗ್ರಾಮೀಣ ಬದುಕಿನೊಂದಿಗೆ ಆಳವಾಗಿ ಬೆಸೆದುಕೊಂಡಿರುವ ಅಪರೂಪದ ಪರಂಪರೆ.

ಗಣೇಶ ಹಬ್ಬದ ಸಂಭ್ರಮ ಮುಗಿದ ಬಳಿಕ ಅನಂತನ ಹುಣ್ಣಿಮೆಯವರೆಗೆ ಸುಮಾರು ಏಳು ದಿನಗಳ ಕಾಲ ಹಳ್ಳಿಗಳ ಓಣಿ–ಓಣಿಗಳಲ್ಲಿ ಜೋಕುಮಾರನ ಆರಾಧನೆ ನಡೆಯುತ್ತದೆ. ರೈತಾಪಿ ಬದುಕಿನಲ್ಲಿ ಮಳೆಯ ಮಹತ್ವವನ್ನು ಸಾರುವ ಈ ಆಚರಣೆಯಲ್ಲಿ ಜೋಕುಮಾರ ಮಳೆ–ಬೆಳೆಯ ದೈವವಾಗಿ ಪೂಜಿಸಲ್ಪಡುತ್ತಾನೆ. ಗಣೇಶ ಮಳೆ ತರದಿದ್ದರೂ ಜೋಕುಮಾರ ಖಂಡಿತ ಮಳೆ ತರುತ್ತಾನೆ ಎಂಬ ನಂಬಿಕೆ ಗ್ರಾಮೀಣ ಜನರಲ್ಲಿದೆ.

**ಬುಟ್ಟಿಯಲ್ಲಿ ಜೋಕುಮಾರನ ಪಯಣ**

ಹೊಸ ಬಿದಿರಿನ ಬುಟ್ಟಿಯಲ್ಲಿ ಮಣ್ಣಿನಿಂದ ಜೋಕುಮಾರನ ಮೂರ್ತಿ ತಯಾರಿಸಿ, ಬೇವಿನ ಎಲೆ, ಹೂವು ಹಾಗೂ ಮೆಣಸಿನಕಾಯಿಗಳಿಂದ ಅಲಂಕರಿಸಲಾಗುತ್ತದೆ. ಅಗಲವಾದ ಮುಖ, ದೊಡ್ಡ ಕಣ್ಣು–ಮೂಗು, ತಲೆಗೆ ರುಮಾಲು ಹಾಗೂ ಹಣೆಗೆ ವಿಭೂತಿ–ಕುಂಕುಮ ಧರಿಸಿದ ಜೋಕುಮಾರನ ಮೂರ್ತಿ ಬೇವಿನ ತಪ್ಪಲಿನಿಂದ ತುಂಬಿದ ಬುಟ್ಟಿಯಲ್ಲಿ ಪ್ರತಿಷ್ಠಾಪಿಸಲಾಗುತ್ತದೆ.

ಮಹಿಳೆಯರು ಬುಟ್ಟಿಯನ್ನು ತಲೆಯ ಮೇಲೆ ಹೊತ್ತುಕೊಂಡು ಮನೆಮನೆಗೆ ತೆರಳಿ ಜೋಕುಮಾರನ ಸ್ತುತಿಯ ಜನಪದ ಹಾಡುಗಳನ್ನು ಹಾಡುತ್ತಾರೆ. ಮನೆಯುವರು ಜೋಳ, ಸಜ್ಜಿ, ಗೋಧಿ, ಕಡಲೆ, ಹೆಸರು, ತೆಂಗಿನಕಾಯಿ ಸೇರಿದಂತೆ ದವಸ–ಧಾನ್ಯಗಳನ್ನು ನೈವೇದ್ಯವಾಗಿ ಅರ್ಪಿಸುತ್ತಾರೆ. ಪ್ರತಿಯಾಗಿ ಬೇವಿನ ತಪ್ಪಲಿನ ಪ್ರಸಾದ ನೀಡಲಾಗುತ್ತದೆ.

**ಹಾಡಿನಲ್ಲಿದೆ ಕೃಷಿ ಬದುಕಿನ ಆಶಯ**

"ಅಡ್ಡಡ್ಡ ಮಳೆ ಬಂದಾ ದೊಡ್ಡದೊಡ್ಡ ಕೆರೆ ತುಂಬಿ ಗೊಡ್ಡು ಗೂಳೆಲ್ಲ ಹೈನಾದೇ ಜೋಕುಮಾರ " ಎಂಬ ಹಾಡು ಕೇವಲ ಜಾನಪದ ಗೀತೆಯಲ್ಲ, ಅದು ರೈತನ ಬದುಕಿನ ಆಶಯಗಳ ಪ್ರತಿಬಿಂಬ. ಎಲ್ಲೆಡೆ ಮಳೆ ಸುರಿಯಲಿ, ಕೆರೆ–ಕಟ್ಟೆಗಳು ತುಂಬಲಿ, ಹೊಲಗಳು ಹಸಿರಾಗಲಿ, ಜಾನುವಾರುಗಳು ಸಮೃದ್ಧಿಯಾಗಲಿ ಎಂಬ ಹಾರೈಕೆ ಇದರಲ್ಲಿದೆ.

ಓದಲು–ಬರೆಯಲು ಬಾರದ ಗ್ರಾಮೀಣ ಮಹಿಳೆಯರು ತಲೆತಲಾಂತರಗಳಿಂದ ಹಾಡುಗಳ ಮೂಲಕ ಈ ಪರಂಪರೆಯನ್ನು ಜೀವಂತವಾಗಿರಿಸಿರುವುದು ಜಾನಪದ ಸಂಸ್ಕೃತಿಯ ವಿಶೇಷತೆ.

ಜೋಕುಮಾರನಿಗೆ ಪ್ರತ್ಯೇಕ ಗುಡಿ–ಗುಂಡಾರಗಳಿಲ್ಲ. ಅವನ ಜನನ, ಜೀವನ ಹಾಗೂ ಅಂತ್ಯದ ಕುರಿತು ಹಲವು ಜನಪದ ಕಥೆಗಳಿವೆ. ದಕ್ಷಿಣಾದೇವಿಯ ಮಗನೆಂಬ ನಂಬಿಕೆಯೂ ಇದೆ. ಕಾಲ ಬದಲಾದರೂ, ಬದುಕಿನ ಕ್ರಮ ಬದಲಾದರೂ ಜೋಕುಮಾರನ ಆಚರಣೆ ಇಂದಿಗೂ ಮುಂದುವರಿದಿರುವುದು ಉತ್ತರ ಕರ್ನಾಟಕದ ಗ್ರಾಮೀಣ ಸಂಸ್ಕೃತಿಯ ನಿರಂತರತೆಗೆ ಸಾಕ್ಷಿಯಾಗಿದೆ.

ವೈಜ್ಞಾನಿಕ ದೃಷ್ಟಿಕೋನದಲ್ಲಿ ನಂಬಿಕೆಗಳು ವಿಭಿನ್ನವಾಗಿರಬಹುದು. ಆದರೆ ಜೋಕುಮಾರನ ಸುತ್ತ ಬೆಳೆದಿರುವ ಜನಪದ, ಸಾಂಸ್ಕೃತಿಕ ಹಾಗೂ ಸಾಮಾಜಿಕ ಮೌಲ್ಯವನ್ನು ನಿರ್ಲಕ್ಷಿಸಲಾಗದು. ರೈತನ ಮಳೆ–ಬೆಳೆಯ ಆಶಯವನ್ನು ಹಾಡು, ಆಚರಣೆ ಮತ್ತು ನಂಬಿಕೆಯ ಮೂಲಕ ತಲೆಮಾರುಗಳಿಗೆ ಕೊಂಡೊಯ್ಯುತ್ತಿರುವ ಜೋಕುಮಾರಸ್ವಾಮಿ ಇಂದಿಗೂ ಗ್ರಾಮೀಣ ಬದುಕಿನಲ್ಲಿ ಜೀವಂತ ಪರಂಪರೆಯಾಗಿ ಉಳಿದಿದ್ದಾನೆ.



–ಬಸವರಾಜ ಎಂ. ಯರಗುಪ್ಪಿ
ಶಿಕ್ಷಕರು, ರಾಮಗೇರಿ, ಲಕ್ಷ್ಮೇಶ್ವರ, ಗದಗ

## ಕವನ ವಾಚನದಲ್ಲಿ ಗಂಗಾವತಿಯ ಶರಣುಗೆ ಪ್ರಥಮ ಬಹುಮಾನ



**ವಿಜಯಸಾಕ್ಷಿ ಸುದ್ದಿ, ಕೊಪ್ಪಳ**

ನಗರದ ಡಾ. ಸಿಂಪಿ ಲಿಂಗಣ್ಣ ರಸ್ತೆಯ ಹಿಂದ್ ಕೇಸರಿ ಯುವಕ ಮಂಡಳಿ ಗಣೇಶ ಪ್ರತಿಷ್ಠಾಪನಾ ನಿಮಿತ್ತ ಆಯೋಜಿಸಿದ್ದ ಕವನ ವಾಚನ ಸ್ಪರ್ಧೆಯ ಫಲಿತಾಂಶ ಪ್ರಕಟಗೊಂಡಿದೆ ಎಂದು ವೇದಿಕೆ ಅಧ್ಯಕ್ಷ ಬಸವರಾಜ ಕರುಗಲ್ ತಿಳಿಸಿದ್ದಾರೆ.ಗಂಗಾವತಿಯ ಶರಣು ವಿದ್ಯಾನಗರ ಅವರ 'ನನಗೆ ನಾಚಿಕೆ ಇಲ್ಲ' ಕವನ ಪ್ರಥಮ ಬಹುಮಾನ ಪಡೆದಿದೆ. ಕೊಪ್ಪಳದ ಡಾ. ರೇಷ್ಮಾ ಮೇಟಿ ಅವರ 'ಮಧ್ಯಸಾರ–ಆರೋಗ್ಯಕ್ಕೆ ಭಾರ' ಕವಿತೆ ದ್ವಿತೀಯ ಹಾಗೂ ಗದಗ ಜಿಲ್ಲೆಯ ಗವಿಸಿದ್ದಯ್ಯ ಹಳ್ಳಿಕೇರಿಮಠ ಅವರ 'ಆ(ಇ)ವತ್ತ' ಕವನ ತೃತೀಯ ಬಹುಮಾನಕ್ಕೆ ಆಯ್ಕೆಯಾಗಿದೆ.

ನಜೀರ್ ಕೆ.ಎನ್. ಅವರ 'ಬಲ್ಡೋಟಾ ಹಠಾವೋ, ಕೊಪ್ಪಳ ಬಚಾವೋ' ಹಾಗೂ ಅಶೋಕ (ವಸಂತಮಯ) ಅವರ 'ಮರೆತುಬಿಡು ನಿನ್ನೆಗಳ' ಕವನಗಳಿಗೆ ಪುಸ್ತಕ ರೂಪದ ಸಮಾಧಾನಕರ ಬಹುಮಾನ ನೀಡಲಾಗಿದೆ.

ಕವಿ ಸಿರಾಜ್ ಬಿಸರಳ್ಳಿ ಹಾಗೂ ಪ್ರೊ. ಶರಣಬಸಪ್ಪ ಬಿಳಿಯಲಿ ತೀರ್ಪುಗಾರರಾಗಿದ್ದರು. ಒಟ್ಟು 37 ಜನ ಕವಿಗಳು ಹೆಸರು ನೋಂದಾಯಿಸಿದ್ದು, ಮಳೆಯ ನಡುವೆಯೂ 24 ಜನ ಕವಿಗಳು ಸ್ಪರ್ಧೆಯಲ್ಲಿ ಕವನ ವಾಚಿಸಿದರು.

## ಪೌರ ಕಾರ್ಮಿಕರ ನಿತ್ಯ ಸೇವೆ ಶ್ಲಾಘನೀಯ



**ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಪಟ್ಟಣದ ಸ್ವಚ್ಛತೆ ಹಾಗೂ ಸಾರ್ವಜನಿಕರ ಆರೋಗ್ಯ ಕಾಪಾಡುವಲ್ಲಿ ಪೌರ ಕಾರ್ಮಿಕರ ನಿತ್ಯ ಸೇವೆ ಶ್ಲಾಘನೀಯವಾಗಿದೆ ಎಂದು ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಮಂಜುನಾಥ ಗುಳೇದ ಹೇಳಿದರು.

ಪಟ್ಟಣ ಪಂಚಾಯಿತಿ ಸಭಾ ಆವರಣದಲ್ಲಿ ನಡೆದ 15ನೇ ಪೌರ ಕಾರ್ಮಿಕರ ದಿನಾಚರಣೆ ಅಂಗವಾಗಿ ಪೌರ ಕಾರ್ಮಿಕರನ್ನು ಸನ್ಮಾನಿಸಿ ಅವರು ಮಾತನಾಡಿದರು. ಪೌರ ಕಾರ್ಮಿಕರು ತಮ್ಮ ಆರೋಗ್ಯವನ್ನೂ ಲೆಕ್ಕಿಸದೆ ನಿಷ್ಠೆಯಿಂದ ಕೆಲಸ ಮಾಡುತ್ತಿರುವ ಶ್ರಮಜೀವಿಗಳು. ಅವರ ಸೇವೆಯಿಂದ ಪಟ್ಟಣ ಸ್ವಚ್ಛವಾಗಿದ್ದು, ಸಾರ್ವಜನಿಕರು ಆರೋಗ್ಯಕರ ವಾತಾವರಣದಲ್ಲಿ ಬದುಕಲು ಸಾಧ್ಯವಾಗಿದೆ. ಆದ್ದರಿಂದ ಅವರನ್ನು ಗೌರವದಿಂದ ಕಾಣಬೇಕು ಎಂದರು.

ರಮೇಶ ಮ್ಯಾಗೇರಿ ಮಾತನಾಡಿ, ಕೋವಿಡ್ ಸಂದರ್ಭದಲ್ಲಿ ಪೌರ ಕಾರ್ಮಿಕರು ತಮ್ಮ ಆರೋಗ್ಯದ ಬಗ್ಗೆ ಕಾಳಜಿ ವಹಿಸದೆ ಸೇವೆ ಸಲ್ಲಿಸಿದ ಯೋಧರು. ಕಾರ್ಮಿಕರು ಆರೋಗ್ಯ ಕವಚಗಳನ್ನು ಧರಿಸಿ ಕಾಯಕ ನಿರ್ವಹಿಸುವುದರ ಜೊತೆಗೆ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಿ ಸಮಾಜದ ಉತ್ತಮ ಪ್ರಜೆಗಳನ್ನಾಗಿ ರೂಪಿಸಬೇಕು ಎಂದರು.

ಪೌರ ಕಾರ್ಮಿಕರಿಗಾಗಿ ಆಯೋಜಿಸಿದ್ದ ಕ್ರೀಡಾಕೂಟದಲ್ಲಿ ವಿಜೇತರಾದವರಿಗೆ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ರಾಮಣ್ಣ ಚಲವಾದಿ, ಮಹಾಂತಪ್ಪ ದಿವಟರ, ಎಂ.ಸಿ. ಸಜ್ಜನ, ಗಾಯತ್ರಿ ಚಲವಾದಿ, ಮುನೀರ ನದ್ದಿಮುಲ್ಲಾ, ಬಸವರಾಜ ಮೋಕಾಶಿ ಸೇರಿದಂತೆ ಪಪಂ ಸಿಬ್ಬಂದಿ ಇತರರು ಉಪಸ್ಥಿತರಿದ್ದರು.

## ಖೋ ಖೋದಲ್ಲಿ ಮಾಚೇನಹಳ್ಳಿ ಶಾಲೆಯ ಸಾಧನೆ



**ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಶಿರಹಟ್ಟಿ ತಾಲೂಕಿನ ಮಾಚೇನಹಳ್ಳಿ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿನಿಯರು ಖೋ ಖೋ ಕ್ರೀಡೆಯಲ್ಲಿ ಸಾಧನೆ ಮಾಡಿದ್ದು, ತಾಲೂಕು ಮಟ್ಟದ ಕ್ರೀಡಾಕೂಟದಲ್ಲಿ ಪ್ರಥ 'ಮ ಸ್ಥಾನ ಪಡೆದು ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ದೈಹಿಕ ಶಿಕ್ಷಣ ಶಿಕ್ಷಕರಿಲ್ಲದಿದ್ದರೂ ಸಮಾಜ ವಿಜ್ಞಾನ ಶಿಕ್ಷಕರಾದ ವಿ.ಡಿ. ಬೀರಪ್ಪನವರ ಅವರು ವಿದ್ಯಾರ್ಥಿನಿಯರಿಗೆ ಬೆಳಿಗ್ಗೆ ಹಾಗೂ ಸಂಜೆ ಹೆಚ್ಚುವರಿ ತರಬೇತಿ ನೀಡಿದ್ದು, ಅವರ ಪರಿಶ್ರಮಕ್ಕೆ ಈ ಸಾಧನೆ ಸಾಕ್ಷಿಯಾಗಿದೆ.

ವಿದ್ಯಾರ್ಥಿನಿಯರ ಶ್ರದ್ಧೆ, ಪರಿಶ್ರಮ ಹಾಗೂ ಶಿಕ್ಷಕರ ಮಾರ್ಗದರ್ಶನದಿಂದ ಶಾಲೆಗೆ ಕೀರ್ತಿ ತಂದಿದ್ದಾರೆ.

ಎಸ್‌ಡಿಎಂಸಿ ನಿಕಟಪೂರ್ವ ಸದಸ್ಯ ಪರಶುರಾಮ ಪಾಟೀಲ ಹಾಗೂ ಹಳೆಯ ವಿದ್ಯಾರ್ಥಿ ಮಹಾಂತೇಶ ಕಮತ ಅವರ ಬೆಂಬಲ ಮತ್ತು ಪ್ರೋತ್ಸಾಹವನ್ನು ಶಾಲಾ ಆಡಳಿತ ಸ್ಮರಿಸಿದೆ.

ವಿದ್ಯಾರ್ಥಿನಿಯರ ಸಾಧನೆಗೆ ಎಸ್‌ಡಿಎಂಸಿ ಅಧ್ಯಕ್ಷ ಉಮೇಶ ಮೂಲಿಮನಿ, ಸರ್ವ ಸದಸ್ಯರು, ಪ್ರಭಾರಿ ಮುಖ್ಯೋಪಾಧ್ಯಾಯ ಐ.ಪಿ. ದೋಟಿಹಾಳ, ಶಿಕ್ಷಕರು, ಸಿಬ್ಬಂದಿ, ಗ್ರಾಮದ ಗುರುಹಿರಿಯರು ಹಾಗೂ ಹಳೆಯ ವಿದ್ಯಾರ್ಥಿಗಳು ಅಭಿನಂದನೆ ಸಲ್ಲಿಸಿದ್ದಾರೆ

## ಸ್ಕೇಟಿಂಗ್ ಸ್ಪರ್ಧೆಯಲ್ಲಿ ಕ್ರೀಡಾಪಟುಗಳ ಸಾಧನೆ




**ವಿಜಯಸಾಕ್ಷಿ ಸುದ್ದಿ, ಗದಗ**

ಬೆಳಗಾವಿಯಲ್ಲಿ ಕರ್ನಾಟಕ ರೋಲರ್ ಸ್ಕೇಟಿಂಗ್ ಅಸೋಸಿಯೇಷನ್ ಆಯೋಜಿಸಿದ್ದ ಫಸ್ಟ್ ನಾರ್ತ್ ಕರ್ನಾಟಕ ಸ್ಪೀಡ್ ಸ್ಕೇಟಿಂಗ್ ಚಾಂಪಿಯನ್‌ಶಿಪ್‌ನಲ್ಲಿ ಗದಗ ಜಿಲ್ಲೆಯ ರೋಲರ್ ಸ್ಕೇಟಿಂಗ್ ಅಸೋಸಿಯೇಷನ್ ಕ್ರೀಡಾಪಟುಗಳು ಗಮನಾರ್ಹ ಸಾಧನೆ ಮಾಡಿದ್ದಾರೆ.

ಕ್ರೀಡಾಪಟುಗಳಾದ ಸಿರಿ ಎಂ. ಕುರಿ ಒಂದು ಚಿನ್ನ ಹಾಗೂ ಒಂದು ಬೆಳ್ಳಿ ಪದಕ ಗೆದ್ದಿದ್ದಾರೆ. ಅನನ್ಯಾ ಕುರಿ, ಸುದೀಪ್ ಸಿಂಗ್ ಹಾಗೂ ಆರ್ವಿ ಎಸ್.ಜಿ. ತಲಾ ಕಂಚಿನ ಪದಕ ಪಡೆದು ಜಿಲ್ಲೆಯ ಕೀರ್ತಿ ಹೆಚ್ಚಿಸಿದ್ದಾರೆ.

ಕ್ರೀಡಾಪಟುಗಳ ಸಾಧನೆಗೆ ಸ್ಕೇಟಿಂಗ್ ತರಬೇತುದಾರ ಮಂಜುನಾಥ ಕುರಿ ಅಭಿನಂದನೆ ಸಲ್ಲಿಸಿದ್ದು, ಮುಂದಿನ ಸ್ಪರ್ಧೆಗಳಲ್ಲೂ ಉತ್ತಮ ಪ್ರದರ್ಶನ ನೀಡುವಂತೆ ಶುಭ ಹಾರೈಸಿದ್ದಾರೆ.

## ಪೌರ ಕಾರ್ಮಿಕರು ಕಾಯಕಯೋಗಿಗಳು: ಅರುಣ ಕುಲಕರ್ಣಿ

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**



ಪೌರ ಕಾರ್ಮಿಕರು ನಿಜಕ್ಕೂ ಕಾಯಕಯೋಗಿಗಳಾಗಿದ್ದು, ಮಳೆ, ಬಿಸಿಲು, ಚಳಿ ಎನ್ನದೆ ವರ್ಷದ 12 ತಿಂಗಳೂ ಪಟ್ಟಣವನ್ನು ಸ್ವಚ್ಛವಾಗಿಡಲು ಶ್ರಮಿಸುತ್ತಿದ್ದಾರೆ. ಅವರ ದಿನಾಚರಣೆ ಅರ್ಥಪೂರ್ಣವಾಗಿದೆ ಎಂದು ನಿವೃತ್ತ ಮುಖ್ಯ ಶಿಕ್ಷಕ ಅರುಣ ಕುಲಕರ್ಣಿ ಹೇಳಿದರು.

ಪಟ್ಟಣ ಪಂಚಾಯತಿಯಲ್ಲಿ ನಡೆದ 15ನೇ ಪೌರ ಕಾರ್ಮಿಕರ ದಿನಾಚರಣೆ ಉದ್ಘಾಟಿಸಿ ಅವರು ಮಾತನಾಡಿದರು. ಪೌರ ಕಾರ್ಮಿಕರು ನಿಷ್ಠೆ ಹಾಗೂ ಪ್ರಾಮಾಣಿಕತೆಯಿಂದ ಕರ್ತವ್ಯ ನಿರ್ವಹಿಸುವುದರ ಜೊತೆಗೆ ಆರೋಗ್ಯದ ಬಗ್ಗೆಯೂ ಕಾಳಜಿ ವಹಿಸಬೇಕು. ದುಶ್ಚಟಗಳಿಂದ ದೂರವಿದ್ದು, ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುವ ಮೂಲಕ ಉತ್ತಮ ಭವಿಷ್ಯ ರೂಪಿಸಬೇಕು ಎಂದರು.

ಪಟ್ಟಣ ಪಂಚಾಯತಿ ಮುಖ್ಯಾಧಿಕಾರಿ ಮಲ್ಲೇಶ ಪಚ್ಚಿ ಮಾತನಾಡಿ, ಪೌರ ಕಾರ್ಮಿಕರು ತಮ್ಮ ಸಮಸ್ಯೆಗಳನ್ನು ತಿಳಿಸಿದರೆ ಅಗತ್ಯ ಸಹಕಾರ ನೀಡಲಾಗುವುದು. ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸಿ ಸಮಾಜದಲ್ಲಿ ಗೌರವಾನ್ವಿತ ಸ್ಥಾನ ಪಡೆಯುವಂತೆ ಮಾಡಬೇಕು ಎಂದರು.

ಎಸ್‌ಬಿಐ ವ್ಯವಸ್ಥಾಪಕ ಮಾಲತೇಶ ಕದಂಬ ಬ್ಯಾಂಕ್‌ನ ವಿವಿಧ ಯೋಜನೆಗಳ ಸದುಪಯೋಗ ಪಡೆದುಕೊಳ್ಳುವಂತೆ ಸಲಹೆ ನೀಡಿದರು. ಸಂಘದ ಉಪಾಧ್ಯಕ್ಷ ಮಲ್ಲಿಕಾರ್ಜುನ ಹಿರೇವಡೆಯರ ಮಾತನಾಡಿ, ಮಕ್ಕಳಿಗೆ ಶಿಕ್ಷಣ ನೀಡಿ ಹೊಸ ಭವಿಷ್ಯ ರೂಪಿಸೋಣ ಎಂದರು.

ಸಂಘದ ಅಧ್ಯಕ್ಷ ನೀಲಪ್ಪ ಚಳ್ಳಮರದ ಅಧ್ಯಕ್ಷತೆ ವಹಿಸಿದ್ದರು. ಗಣ್ಯರು ಹಾಗೂ ಪೌರ ಕಾರ್ಮಿಕರನ್ನು ಸನ್ಮಾನಿಸಲಾಯಿತು.

## ಪಶ್ಚಿಮ ಪದವೀಧರ ಚುನಾವಣೆ: ಶಸ್ತ್ರಾಸ್ತ್ರ ಠೇವಣಿಗೆ ಆದೇಶ


**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಪಶ್ಚಿಮ ಪದವೀಧರ ಕ್ಷೇತ್ರದ ಚುನಾವಣೆ ಘೋಷಣೆಯಾಗಿರುವ ಹಿನ್ನೆಲೆಯಲ್ಲಿ ಸೆ.22ರಿಂದ ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿದೆ. ಈ ಹಿನ್ನೆಲೆಯಲ್ಲಿ ಪರವಾನಗಿ ಹೊಂದಿರುವ ಶಸ್ತ್ರಾಸ್ತ್ರಗಳನ್ನು ಸಂಬಂಧಪಟ್ಟ ಪೊಲೀಸ್ ಠಾಣೆಯಲ್ಲಿ ಠೇವಣಿ ಇಡುವಂತೆ ಜಿಲ್ಲಾಧಿಕಾರಿ ಸ್ನೇಹಲ್ ಆರ್. ಆದೇಶಿಸಿದ್ದಾರೆ.

ಪರವಾನಗಿದಾರರು ಶಸ್ತ್ರಾಸ್ತ್ರಗಳನ್ನು ಠೇವಣಿ ಇಟ್ಟು ಸ್ವೀಕೃತಿ ಪತ್ರ ಪಡೆಯಬೇಕು. ಚುನಾವಣಾ ಪ್ರಕ್ರಿಯೆ ಪೂರ್ಣಗೊಂಡ ಬಳಿಕ ಶಸ್ತ್ರಾಸ್ತ್ರಗಳನ್ನು ವಾಪಸ್ ಪಡೆಯಬಹುದಾಗಿದೆ.

ಬ್ಯಾಂಕ್‌ಗಳು, ಸರ್ಕಾರಿ ಹಾಗೂ ಖಾಸಗಿ ಸಂಸ್ಥೆಗಳ ಭದ್ರತೆಗಾಗಿ ಶಸ್ತ್ರಾಸ್ತ್ರ ಹೊಂದಿರುವವರು ಮತ್ತು ಜೀವ ರಕ್ಷಣೆಗಾಗಿ ಶಸ್ತ್ರಾಸ್ತ್ರ ಇಟ್ಟುಕೊಳ್ಳುವುದು ಅನಿವಾರ್ಯವಾಗಿರುವ ಪರವಾನಗಿದಾರರು ಪೊಲೀಸ್ ಠಾಣೆಯಲ್ಲಿ ಏಳು ದಿನಗಳೊಳಗೆ ವಿನಾಯಿತಿ ಕೋರಿ ಅರ್ಜಿ ಸಲ್ಲಿಸಬೇಕು. ಅರ್ಜಿಗಳನ್ನು ಸ್ಕ್ರೀನಿಂಗ್ ಸಮಿತಿ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಲಿದೆ ಎಂದು ಜಿಲ್ಲಾಧಿಕಾರಿ ತಿಳಿಸಿದ್ದಾರೆ.

## ನಿಧನ
### ಶೇಖರಪ್ಪ ಛಬ್ಬೇರಭಾವಿ



ಲಕ್ಕುಂಡಿ: ಇಲ್ಲಿನ ಕಟಗಿಯವರ ಓಣಿಯ ನಿವಾಸಿ ಮಾಜಿ ಸೈನಿಕ ಶೇಖರಪ್ಪ ಬಸಪ್ಪ ಛಬ್ಬೇರಭಾವಿ (80) ಗುರುವಾರ ನಿಧನರಾದರು.

ಮೃತರು ಪತ್ನಿ, ಮೂವರು ಪುತ್ರರು, ಪುತ್ರಿ ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಅವರ ಅಂತ್ಯಕ್ರಿಯೆ ಶುಕ್ರವಾರ ಮಧ್ಯಾಹ್ನ 3ಗಂಟೆಗೆ ಲಕ್ಕುಂಡಿ ಗ್ರಾಮದ ಜಂತ್ಲಿಶಿರೂರ ರಸ್ತೆಯಲ್ಲಿರುವ ಅವರ ಜಮೀನಿನಲ್ಲಿ ನೆರವೇರಲಿದೆ.

### ಅವರ ಸೇವೆಗೆ ಗೌರವ, ಮಾನವೀಯತೆಗೆ ಆದ್ಯತೆ

## ನಗರದ ಸ್ವಚ್ಛತೆಯ ಬೆನ್ನೆಲುಬು ಪೌರ ಕಾರ್ಮಿಕರು




**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಪೌರ ಕಾರ್ಮಿಕರನ್ನು ನಮ್ಮವರೇ ಎಂದು ಭಾವಿಸಿ ಮಾನವೀಯತೆಯಿಂದ ನಡೆಸಿಕೊಳ್ಳಬೇಕು. ಪಟ್ಟಣದ ಸ್ವಚ್ಛತೆಗಾಗಿ ಹಗಲಿರುಳು ಶ್ರಮಿಸುವ ಅವರ ಸೇವೆ ಅಮೂಲ್ಯವಾಗಿದ್ದು, ಸಮಾಜದಲ್ಲಿ ಪ್ರತಿಯೊಬ್ಬರೂ ಅವರನ್ನು ಗೌರವದಿಂದ ಕಾಣಬೇಕು ಎಂದು ಪುರಸಭಾ ಅಧ್ಯಕ್ಷೆ ರೇಷ್ಮಾ ಶಿಖಂದರ್ ಹೇಳಿದರು.

ಪಟ್ಟಣದ ಹಳೆ ಹಗರಿಬೊಮ್ಮನಹಳ್ಳಿಯ ಸಮುದಾಯ ಭವನದಲ್ಲಿ ನಡೆದ 19ನೇ ಪೌರ ಕಾರ್ಮಿಕರ ದಿನಾಚರಣೆ ಉದ್ಘಾಟಿಸಿ ಅವರು ಮಾತನಾಡಿದರು.

ಸಮಾಜದ ಕೆಲವರು ಪೌರ ಕಾರ್ಮಿಕರನ್ನು ಕೀಳಾಗಿ ಕಾಣುವ ಮನೋಭಾವ ಹೊಂದಿದ್ದಾರೆ. ಇಂತಹ ಮನೋಭಾವ ಬದಲಾಗಬೇಕು. ಸಮಾಜದಲ್ಲಿ ಎಲ್ಲರೂ ಸಮಾನರು. ಪೌರ ಕಾರ್ಮಿಕರ ಕಾಯಕವನ್ನು ಗೌರವಿಸುವುದು ಪ್ರತಿಯೊಬ್ಬರ ಜವಾಬ್ದಾರಿ ಎಂದರು.

ರಾಜ್ಯ ಪೌರ ಕಾರ್ಮಿಕ ಹಾಗೂ ನೌಕರರ ಸಂಘದ ಅಧ್ಯಕ್ಷ ಪ್ರಭಾಕರ ಪ್ರಾಸ್ತಾವಿಕವಾಗಿ ಮಾತನಾಡಿದರು.

ಪುರಸಭಾ ಸದಸ್ಯ ಪವಾಡಿ ಹನುಮಂತಪ್ಪ ಮಾತನಾಡಿ, ಪೌರ ಕಾರ್ಮಿಕರಿಗೆ ತಮ್ಮದೇ ಆದ ಅಸ್ತಿತ್ವವಿದ್ದು, ಅವರನ್ನು ಗೌರವಯುತವಾಗಿ ನಡೆಸಿಕೊಳ್ಳಬೇಕು ಎಂದರು. ಮಾಜಿ ಅಧ್ಯಕ್ಷ ಎಂ. ಮರಿರಾಮಪ್ಪ ಮಾತನಾಡಿ, ಸ್ವಚ್ಛತಾ ಕಾರ್ಯದಲ್ಲಿ ತೊಡಗುವಾಗ ರಕ್ಷಾಕವಚ ಸೇರಿದಂತೆ ಸುರಕ್ಷತಾ ಪರಿಕರಗಳನ್ನು ಕಡ್ಡಾಯವಾಗಿ ಬಳಸುವಂತೆ ಕರೆ ನೀಡಿದರು.

ಸದಸ್ಯ ಜೋಗಿ ಹನುಮಂತಪ್ಪ ಪೌರ ಕಾರ್ಮಿಕರು ಸಮಾಜದ ರಕ್ಷಕರು ಹಾಗೂ ಸ್ವಸ್ಥ ಸಮಾಜದ ರೂವಾರಿಗಳು ಎಂದರು. ಸದಸ್ಯ ದೀಪಕ್ ಕಠಾರಿ ಹಾಗೂ ಹಿರಿಯ ಸದಸ್ಯೆ ಕಮಲಮ್ಮ ಮಾತನಾಡಿ, ಪೌರ ಕಾರ್ಮಿಕರಿಗೆ ಪುರಸಭೆಯಿಂದ ಜೀವ ವಿಮೆ ಮಾಡಿಸುವುದು ಹಾಗೂ ಅವರ ಆರೋಗ್ಯ ರಕ್ಷಣೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಒತ್ತಾಯಿಸಿದರು.

ಮುಖ್ಯಾಧಿಕಾರಿ ಎಂ.ಕೆ. ಮುಗಳಿ ಮಾತನಾಡಿ, ರಜಾದಿನವಾಗಿದ್ದರೂ ಬೆಳಗಿನ ಕೆಲಸಗಳನ್ನು ಮುಗಿಸಿ ಕಾರ್ಯಕ್ರಮಕ್ಕೆ ಹಾಜರಾಗಿರುವುದು ಪೌರ ಕಾರ್ಮಿಕರ ಕಾರ್ಯದಕ್ಷತೆ ಹಾಗೂ ಕರ್ತವ್ಯನಿಷ್ಠೆಗೆ ಸಾಕ್ಷಿಯಾಗಿದೆ ಎಂದರು.

> ಪೌರ ಕಾರ್ಮಿಕರ ಸೇವೆ ಅಮೂಲ್ಯ. ಪಟ್ಟಣದ ಸ್ವಚ್ಛತೆಗಾಗಿ ಶ್ರಮಿಸುವ ಅವರ ಕಾಯಕವನ್ನು ಗೌರವಿಸಿ, ಮಾನವೀಯತೆಯಿಂದ ನಡೆದುಕೊಳ್ಳುವುದು ನಮ್ಮೆಲ್ಲರ ಜವಾಬ್ದಾರಿ.
> – ರೇಷ್ಮಾ ಶಿಖಂದರ್, ಪುರಸಭಾ ಅಧ್ಯಕ್ಷೆ

ಈ ಸಂದರ್ಭದಲ್ಲಿ ಪುರಸಭಾ ಉಪಾಧ್ಯಕ್ಷೆ ನೇತ್ರಾವತಿ ಹುಚ್ಚಪ್ಪ, ಸದಸ್ಯರಾದ ಚನ್ನಮ್ಮ ವಿಜಯಕುಮಾರ್, ಕಮಲಮ್ಮ, ಅಂಬಳಿ ಮಂಗಳಾ, ಬೋವಿ ವೀರಣ್ಣ, ನೆಲ್ಲು ಇಸ್ಮಾಯಿಲ್ ಸಾಬ್, ನವೀನ್ ಸಂಜ್ಯೋತ, ರಾಜೇಶ್ ಬ್ಯಾಡಗಿ ಸೇರಿದಂತೆ ಮುಖಂಡರಾದ ಸೆರೆಗಾರ ಹುಚ್ಚಪ್ಪ, ಗುಂಡ್ರು ಹನುಮಂತ, ಆರ್.ಎಸ್.ಎಸ್. ಎನ್. ಅಧ್ಯಕ್ಷ ದಾದಮ್ಮನವರ ಬಸವರಾಜ್, ಪುರಸಭಾ ಶಾಖಾ ಅಧ್ಯಕ್ಷರಾದ ಬೆಳ್ಳಕ್ಕಿ ಮಾರುತಿ, ಚಂದ್ರು, ಗುಡದಯ್ಯ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### 6 ಸಾವಿರ ಹೋಳಿಗೆ, 10 ಕೆ.ಜಿ. ತುಪ್ಪದ ಮಹಾದಾಸೋಹ

## ಹೋಳಿಗೆಯ ಸಿಹಿಯಲ್ಲಿ ಅರಳಿದ 50ರ ಗಜಾನನೋತ್ಸವ

**ವಿಜಯಸಾಕ್ಷಿ ಸುದ್ದಿ, ಗದಗ**



ನಗರದ ನಾಲ್ವಾಡದವರ ಓಣಿಯ 'ಗದಗ ಕಾ ರಾಜಾ' ಶ್ರೀ ಗಜಾನನೋತ್ಸವ ಸಮಿತಿಯ 50ನೇ ವರ್ಷದ ಸಂಭ್ರಮಾಚರಣೆಗೆ ಬುಧವಾರ ನಡೆದ ಮಹಾಅನ್ನಸಂತರ್ಪಣೆ ವಿಶೇಷ ಮೆರುಗು ನೀಡಿತು. ಐದು ದಶಕಗಳ ಉತ್ಸವ ಪರಂಪರೆಯ ಸಂಭ್ರಮದಲ್ಲಿ ಸಾವಿರಾರು ಭಕ್ತರು ಪಾಲ್ಗೊಂಡು ಶ್ರದ್ಧಾ–ಭಕ್ತಿಯಿಂದ ಪ್ರಸಾದ ಸ್ವೀಕರಿಸಿದರು.

50ನೇ ವರ್ಷದ ಸಂಭ್ರಮವನ್ನು ಸ್ಮರಣೀಯವಾಗಿಸುವಂತೆ ನಡೆದ ಅನ್ನದಾಸೋಹದಲ್ಲಿ ಬರೋಬ್ಬರಿ 6 ಸಾವಿರ ಹೋಳಿಗೆ, 10 ಕೆ.ಜಿ. ತುಪ್ಪ, 4 ಕ್ವಿಂಟಲ್ ಅನ್ನ, 1 ಕ್ವಿಂಟಲ್‌ಗೂ ಹೆಚ್ಚು ಬದನೆಕಾಯಿ ಪಲ್ಯ, 5 ಕ್ವಿಂಟಲ್ ಸಾರು, ಕೋಸಂಬರಿ ಹಾಗೂ ಉಪ್ಪಿನಕಾಯಿ ಸಿದ್ಧಪಡಿಸಲಾಗಿತ್ತು. ಹೀಗಾಗಿ ನಾಲ್ವಾಡ ಓಣಿಯಲ್ಲಿ ಅನ್ನದಾನದ ಸಡಗರ ಮನೆಮಾಡಿತ್ತು.

ಸರ್ವಸಮುದಾಯದ ಭಕ್ತರು ಸರದಿ ಸಾಲಿನಲ್ಲಿ ಶಿಸ್ತುಬದ್ಧವಾಗಿ ಆಗಮಿಸಿ ಪ್ರಸಾದ ಸ್ವೀಕರಿಸಿದರು. ವಿಶೇಷವಾಗಿ ನಾಲ್ವಾಡ ಓಣಿಯ ಮಹಿಳೆಯರು ಹೋಳಿಗೆ ಸಿದ್ಧಪಡಿಸುವ ಕಾರ್ಯದಲ್ಲಿ ಉತ್ಸಾಹದಿಂದ ಕೈಜೋಡಿಸಿ ಅನ್ನದಾಸೋಹದ ಸಿದ್ಧತೆಯಲ್ಲಿ ಪ್ರಮುಖ ಪಾತ್ರ ವಹಿಸಿದರು. ಮಹಿಳೆಯರ ಶ್ರಮ, ಭಕ್ತರ ಸಹಕಾರ ಹಾಗೂ ಯುವಕರ ಉತ್ಸಾಹ ಉತ್ಸವಕ್ಕೆ ಮತ್ತಷ್ಟು ಮೆರುಗು ತಂದಿತು.

ಗಜಾನನೋತ್ಸವದ 50ನೇ ವರ್ಷದ ಅಂಗವಾಗಿ ಆಯೋಜಿಸಿರುವ ಶ್ರೀ ಮಲ್ಲಾರಲಿಂಗೇಶ್ವರ ರೂಪಕ ಪ್ರದರ್ಶನವೂ ಭಕ್ತರ ಗಮನ ಸೆಳೆಯಿತು. ರೂಪಕದ ದೃಶ್ಯಾವಳಿಗಳು ಭಕ್ತರಲ್ಲಿ ಭಕ್ತಿಭಾವ ಮೂಡಿಸಿದವು. ಮಲ್ಲಾರಲಿಂಗೇಶ್ವರ ರೂಪಕ ಪ್ರದರ್ಶನ ಸೆ. 24ರಂದು ಗುರುವಾರ ಮುಕ್ತಾಯಗೊಳ್ಳಲಿದ್ದು, ಗಣೇಶ ವಿಸರ್ಜನಾ ಮೆರವಣಿಗೆ ಸೆ. 25ರಂದು ಶುಕ್ರವಾರ ನಡೆಯಲಿದೆ.

> ಸರ್ವಸಮುದಾಯದ ಗುರುಹಿರಿಯರ ಮಾರ್ಗದರ್ಶನ, ಯುವಕರ ಶ್ರಮ ಹಾಗೂ ದಾನಿಗಳ ಸಹಕಾರದಿಂದ ಗಜಾನನೋತ್ಸವದ 50ನೇ ವರ್ಷದ ಸಂಭ್ರಮವನ್ನು ಅರ್ಥಪೂರ್ಣವಾಗಿ ಆಚರಿಸಲಾಗುತ್ತಿದೆ. ದಾನಿಗಳು ನೀಡಿದ ದೇಣಿಗೆ ಮತ್ತು ಸಾಮಗ್ರಿಗಳನ್ನು ಸಮರ್ಪಕವಾಗಿ ಸದ್ಬಳಕೆ ಮಾಡಿಕೊಂಡಿರುವುದೇ ನಮ್ಮ ಹೆಗ್ಗಳಿಕೆ.
> – ಗಜಾನನೋತ್ಸವ ಸಮಿತಿ ಸಂಘಟಕರು

ರೂಪಕ ಹಾಗೂ ಉತ್ಸವದ ಕಾರ್ಯಕ್ರಮಗಳನ್ನು ಯಶಸ್ವಿಗೊಳಿಸಲು ನಾಲ್ವಾಡ ಓಣಿಯ ಸರ್ವಸಮುದಾಯದ ಗುರುಹಿರಿಯರ ಮಾರ್ಗದರ್ಶನದಲ್ಲಿ ಕ್ರಿಯಾಶೀಲ ಯುವಕರ ತಂಡ ಶ್ರಮಿಸಿದೆ. ದಾನಿಗಳು ಶ್ರದ್ಧಾಭಕ್ತಿಯಿಂದ ನೀಡಿದ ದೇಣಿಗೆ ಹಾಗೂ ಸಾಮಗ್ರಿಗಳನ್ನು ಸಮರ್ಪಕವಾಗಿ ಬಳಸಿಕೊಂಡು ಉತ್ಸವವನ್ನು ಯಶಸ್ವಿಗೊಳಿಸಲಾಗುತ್ತಿದೆ.

## ಬಸವ ಸಮುದಾಯ ಭವನಕ್ಕೆ ₹20 ಲಕ್ಷ ಅನುದಾನ: ಎಚ್.ಕೆ. ಪಾಟೀಲ ಭರವಸೆ

# ಬಸವ ತತ್ವ–ಸಂವಿಧಾನದ ಮೌಲ್ಯಗಳು ಸಮಾನತೆಗೆ ಪೂರಕ



**ವಿಜಯಸಾಕ್ಷಿ ಸುದ್ದಿ, ಗದಗ**

ಬಸವ ತತ್ವ ಹಾಗೂ ಸಂವಿಧಾನದ ಮೌಲ್ಯಗಳು ಸಮಾನತೆಯ ಸಮಾಜ ನಿರ್ಮಾಣಕ್ಕೆ ಪೂರಕವಾಗಿವೆ. ವಚನಗಳು ಕೇವಲ ಭಾಷಣ–ಕ್ಕೆ ಸೀಮಿತವಾಗದೆ, ಅವುಗಳ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವ ದೃಢಸಂಕಲ್ಪ ಮಾಡಬೇಕು ಎಂದು ಮಾಜಿ ಸಚಿವ ಹಾಗೂ ಗದಗ ಶಾಸಕ ಎಚ್.ಕೆ. ಪಾಟೀಲ ಹೇಳಿದರು.

ಗದಗ–ಬೆಟಗೇರಿ ನಗರದ ಕಳಸಾಪುರ ರಸ್ತೆಯ ಶಿವಾನಂದ ನಗರದಲ್ಲಿ ನೂತನವಾಗಿ ನಿರ್ಮಿಸಲಾದ ಬಸವ ಸಮುದಾಯ ಭವನದ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಬಸವದಳ ಕಳೆದ 33 ವರ್ಷಗಳಿಂದ ಭವನ ನಿರ್ಮಾಣಕ್ಕಾಗಿ ನಿರಂತರವಾಗಿ ಶ್ರಮಿಸಿರುವುದು ಶ್ಲಾಘನೀಯ ಎಂದರು.

ವಚನ ಚಿಂತನೆಗಳಿಗೆ ಕಾನೂನುಬದ್ಧ ಬಲ ತುಂಬುವ ಕೆಲಸವೂ ನಡೆಯಬೇಕು. ಬಸವಣ್ಣನವರ ಕಾಯಕ, ದಾಸೋಹ, ಸಮಾನತೆ ಹಾಗೂ ಮಾನವೀಯ ಮೌಲ್ಯಗಳನ್ನು ಸಮಾಜದಲ್ಲಿ ಮತ್ತಷ್ಟು ಬಲಪಡಿಸುವ ಅಗತ್ಯವಿದೆ ಎಂದು ಹೇಳಿದರು.

ಭವನದ ಮುಂದಿನ ಹಂತದ ನಿರ್ಮಾಣ ಕಾರ್ಯಕ್ಕಾಗಿ ಶಾಸಕರ ಅನುದಾನದಡಿ ₹20 ಲಕ್ಷ ನೀಡುವುದಾಗಿ ಎಚ್.ಕೆ. ಪಾಟೀಲ ಭರವಸೆ ನೀಡಿದರು. ಭವನ ನಿರ್ಮಾಣಕ್ಕೆ ಕಾರಣ–ರಾದ ಬಸವದಳದ ಪದಾಧಿಕಾ–ರಿಗಳು, ದಾಸೋಹಿಗಳು ಹಾಗೂ ಸಹಕರಿಸಿದವರನ್ನು ಸ್ಮರಿಸಿ ಅಭಿನಂದಿಸಿದರು.

> ವಚನಗಳು ಕೇವಲ ಭಾಷಣಕ್ಕೆ ಸೀಮಿತವಾಗದೆ, ಅವುಗಳ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವ ದೃಢಸಂಕಲ್ಪ ಮಾಡಬೇಕು. ಬಸವ ತತ್ವ ಮತ್ತು ಸಂವಿಧಾನದ ಮೌಲ್ಯಗಳು ಸಮಾನತೆಯ ಸಮಾಜ ನಿರ್ಮಾಣಕ್ಕೆ ಪೂರಕವಾಗಿವೆ.
> – ಎಚ್.ಕೆ. ಪಾಟೀಲ, ಶಾಸಕ

ಕಾರ್ಯಕ್ರಮದ ಸಾನಿಧ್ಯ ವಹಿಸಿದ್ದ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮೀಜಿ ಆಶೀರ್ವಚನ ನೀಡಿ, ಬಹುದಿನಗಳ ಕನಸಾಗಿದ್ದ ಭವನ ಲೋಕಾರ್ಪಣೆಗೊಂಡಿರುವುದು ಸಂತಸದ ಸಂಗತಿ ಎಂದರು. ಅನುಭವ ಮಂಟಪದ ಮಾದ–ರಿಯಲ್ಲಿ ಭವನವು ಬಸವತತ್ವ, ಶರಣರ ಚಿಂತನೆ ಹಾಗೂ ಸಾಮಾಜಿಕ ವಿಚಾರಗಳ ಚರ್ಚೆ ಮತ್ತು ಪ್ರಸಾರಕ್ಕೆ ಕೇಂದ್ರವಾಗಬೇಕು ಎಂದು ಆಶಿಸಿದರು.

ಬಸವದಳ ಗದಗ–ಬೆಟಗೇರಿ ಅಧ್ಯಕ್ಷ ವಿ.ಕೆ. ಕರಿಗೌಡರ್ ಅಧ್ಯಕ್ಷತೆ ವಹಿಸಿದ್ದರು. ವಿವಿಧ ಕ್ಷೇತ್ರಗಳಲ್ಲಿ ಸಹಕರಿಸಿದ ದಾಸೋಹಿಗಳು, ಇಂಜಿನಿಯರ್‌ಗಳು ಹಾಗೂ ಕಟ್ಟಡ ಕಾರ್ಮಿಕರನ್ನು ಸನ್ಮಾನಿಸಲಾಯಿತು. ನೂರಾರು ಶರಣ–ಶರಣೆಯರು ಹಾಗೂ ವಿವಿಧ ಜಿಲ್ಲೆಗಳಿಂದ ಆಗಮಿಸಿದ್ದ ಬಸವದಳದ ಸದಸ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ಎನ್‌ಎಸ್‌ಎಸ್‌ನಿಂದ ಸಮಾಜಮುಖಿ

# ವ್ಯಕ್ತಿತ್ವ ನಿರ್ಮಾಣ

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ರಾಷ್ಟ್ರೀಯ ಸೇವಾ ಯೋಜನೆ (ಎನ್‌ಎಸ್‌ಎಸ್)ಯಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳುವುದರಿಂದ ಯುವಜನರಲ್ಲಿ ರಾಷ್ಟ್ರೀಯತೆ, ಭಾವೈಕ್ಯತೆ, ಸಹಬಾಳ್ವೆ ಹಾಗೂ ನಾಯಕತ್ವ ಗುಣಗಳು ಬೆಳೆದು, ಸಮಾಜಮುಖಿ ವ್ಯಕ್ತಿತ್ವ ರೂಪುಗೊಳ್ಳುತ್ತದೆ ಎಂದು ರಾಜ್ಯ ಎನ್‌ಎಸ್‌ಎಸ್ ಪ್ರಶಸ್ತಿ ಪುರಸ್ಕೃತ ಶಿವಯೋಗಿ ಹಾವೇರಿ ಹೇಳಿದರು.

ನರೇಗಲ್ ಪಟ್ಟಣದ ಮ–ರಿಯಪ್ಪ ಬಾಳಪ್ಪ ಕಳಕೊಣ್ಣವರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಆಯೋಜಿಸಿದ್ದ ಎನ್‌ಎಸ್‌ಎಸ್ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಗ್ರಾಮೀಣ ಭಾಗದ ನೈಜ ಬದುಕು ಹಾಗೂ ಜನರ ಸ್ಥಿತಿಗತಿಗಳನ್ನು ಹತ್ತಿರದಿಂದ ಅರಿಯಲು ಎನ್‌ಎಸ್‌ಎಸ್ ಅತ್ಯುತ್ತಮ ವೇದಿಕೆ. ಇದು ಸೇವಾ ಮನೋಭಾವದ ಜತೆಗೆ ವೈಜ್ಞಾನಿಕ ದೃಷ್ಟಿಕೋನವನ್ನೂ ಬೆಳೆಸುತ್ತದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲೆ ಡಾ. ಕಸ್ತೂರೆವ್ವ ದಳವಾಯಿ ಮಾತನಾಡಿ, ವಿದ್ಯಾರ್ಥಿಗಳಲ್ಲಿ ಸಾಮಾಜಿ–ಕ ಹೊಣೆಗಾರಿಕೆ ಬೆಳೆಸುವುದೇ ಶಿಕ್ಷಣದ ಪ್ರಮುಖ ಉದ್ದೇಶ. ವಿದ್ಯಾರ್ಥಿ ದೆಸೆಯಲ್ಲೇ ಶಿಸ್ತು, ಸಾಮಾಜಿಕ ಕಳಕಳಿ ಹಾಗೂ ನಾಯಕತ್ವ ಗುಣಗಳನ್ನು ಬೆಳೆಸಿಕೊಳ್ಳಬೇಕು. ಇಂದಿನ ಸನ್ನಡತೆಯೇ ಉಜ್ವಲ ಭವಿಷ್ಯಕ್ಕೆ ಭದ್ರ ಬುನಾದಿ ಎಂದರು. ಎನ್–ಎಸ್‌ಎಸ್ ಕಾರ್ಯಕ್ರಮಾಧಿಕಾರಿ ಸುನಂದಾ ಮುಂಜಿ ಮಾತನಾಡಿ, ಗ್ರಾಮೀಣ ಶಿಬಿರಗಳ ಮೂಲಕ ಹಳ್ಳಿಗಳ ವಾಸ್ತವ ಸಮಸ್ಯೆಗಳನ್ನು ಅರಿತು, ಅನಕ್ಷರಸ್ಥರು ಹಾಗೂ ಹಿಂದುಳಿದ ವರ್ಗದ ಜನರಲ್ಲಿ ಅಕ್ಷರ ಜ್ಞಾನ, ಆರೋಗ್ಯ, ಸಂಸ್ಕಾರ ಮತ್ತು ಪರಿಸರ ನೈರ್ಮಲ್ಯದ ಕುರಿತು ಜಾಗೃತಿ ಮೂಡಿಸುವುದು ಎನ್‌ಎಸ್–ಎಸ್‌ನ ಪ್ರಮುಖ ಆಶಯವಾಗಿದೆ ಎಂದರು. ಎಸ್.ಎಸ್. ಸೂಡಿ, ಅನಿಲಕುಮಾರ, ಶಿವಪ್ಪ ಕುರಬರ, ವಿರೂಪಾಕ್ಷ ಆರ್., ವಿವೇಕಾನಂದ ಹಿರೇಮಠ ಸೇ–ರಿದಂತೆ ಕಾಲೇಜಿನ ಬೋಧಕ–ಬೋಧಕೇತರ ಸಿಬ್ಬಂದಿ ಹಾಗೂ ಎನ್‌ಎಸ್‌ಎಸ್ ಸ್ವಯಂಸೇವಕರು ಉಪಸ್ಥಿತರಿದ್ದರು.

## ಸನ್ಮಾರ್ಗ ಕಾಲೇಜಿನ ಕ್ರೀಡಾಪಟುಗಳ ಕ್ರೀಡಾ ಸಾಧನೆ



**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ತಾಲ್ಲೂಕಿನ 'ಬಿ' ವಲಯದ ಪದವಿ ಪೂರ್ವ ಕಾಲೇಜುಗಳ ಕ್ರೀಡಾಕೂಟದಲ್ಲಿ ನಗರದ ಸನ್ಮಾರ್ಗ ಪದವಿ ಪೂರ್ವ ಕಾಲೇಜಿನ ಕ್ರೀಡಾಪಟುಗಳು ಉತ್ತಮ ಸಾಧನೆ ಮಾಡಿ ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ನಗರದ ಜೆ.ಟಿ. ಮಹಾವಿದ್ಯಾಲಯದಲ್ಲಿ ಶ್ರೀ ಎಂ.ಬಿ. ಮೈಲಾರ ಸರ್ಕಾರಿ ಪದವಿ ಪೂರ್ವ ಕಾಲೇಜು, ಹೊಂಬಳ ಇವರ ಆಶ್ರಯದಲ್ಲಿ ನಡೆದ ಕ್ರೀಡಾಕೂಟದಲ್ಲಿ ಸನ್ಮಾರ್ಗ ಕಾಲೇಜಿನ ಪ್ರಥಮ ವರ್ಷದ ವಾಣಿಜ್ಯ ವಿಭಾಗದ ವಿದ್ಯಾರ್ಥಿ ಅಬ್ಬಾಸ ಅಹ್ಮದ್ ಮುಲ್ಲಾ ಬಾಲಕರ 100 ಮೀಟರ್ ಓಟದಲ್ಲಿ ದ್ವಿತೀಯ ಸ್ಥಾನ ಪಡೆದು ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಅದೇ ರೀತಿ ಪ್ರಥಮ ವರ್ಷದ ವಿಜ್ಞಾನ ವಿಭಾಗದ ವಿದ್ಯಾರ್ಥಿನಿ ನಮ್ರತಾ ವೇರ್ಣೇಕರ ಯೋಗ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದು ಜಿಲ್ಲಾ ಮಟ್ಟಕ್ಕೆ ಅರ್ಹತೆ ಗಳಿಸಿದ್ದಾರೆ. ಗುಂಪು ಆಟವಾದ ಷಟಲ್ ಕಾಕ್ (ಬ್ಯಾಡ್ಮಿಂಟನ್)ನಲ್ಲಿ ಸನ್ಮಾರ್ಗ ಕಾಲೇಜಿನ ಬಾಲಕರ ತಂಡವು ಫೈನಲ್ ಪಂದ್ಯದಲ್ಲಿ ಮೈಲಾರಪ್ಪ ಮೆಣಸಗಿ ಇನ್‌ಸೈಟ್ ಅಕಾಡೆಮಿ ತಂಡವನ್ನು ಸೋಲಿಸಿ ಜಿಲ್ಲಾ ಮಟ್ಟದ ಪಂದ್ಯಾವಳಿಗೆ ಆಯ್ಕೆಯಾಗಿದೆ.

ಕ್ರೀಡಾಪಟುಗಳ ಸಾಧನೆಗೆ ಕಾಲೇಜಿನ ಚೇರಮನ್ ಪ್ರೊ. ರಾಜೇಶ ಕುಲಕರ್ಣಿ, ಪ್ರಾಚಾರ್ಯ ಪ್ರೊ. ಪುನೀತ ದೇಶಪಾಂಡೆ, ಆಡಳಿತಾಧಿಕಾರಿ ಮೃತ್ಯುಂಜಯ ಹಿರೇಮಠ, ನಿರ್ದೇಶಕರಾದ ಪ್ರೊ. ರೋಹಿತ ಒಡೆಯರ್, ಪ್ರೊ. ಸೈಯದ್ ಮತೀನ ಮುಲ್ಲಾ, ಪ್ರೊ. ರಾಹುಲ್ ಒಡೆಯರ್ ಹಾಗೂ ಬೋಧಕ–ಬೋಧಕೇತರ ಸಿಬ್ಬಂದಿ ಅಭಿನಂದಿಸಿ, ಜಿಲ್ಲಾ ಮಟ್ಟದ ಸ್ಪರ್ಧೆಗಳಲ್ಲಿ ಯಶಸ್ಸು ಸಾಧಿಸುವಂತೆ ಶುಭ ಹಾರೈಸಿದ್ದಾರೆ.

## ಮಾಸಿಕ ಗೌರವಧನಕ್ಕೆ ಅರ್ಜಿ

**ವಿಜಯಸಾಕ್ಷಿ ಸುದ್ದಿ, ಗದಗ**

2026–27ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ನೋಂದಾಯಿತ ಜೈನ್ ಬಸದಿಗಳ ಅರ್ಚಕರು, ಬೌದ್ಧ ವಿಹಾರಗಳ ಧಮ್ಮಚಾರಿಗಳು ಹಾಗೂ ಸಿಖ್ ಗುರುದ್ವಾರಗಳ ಗ್ರಂಥಿಗಳಿಗೆ ಮಾಸಿಕ ಗೌರವಧನ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಅರ್ಹರು ಸೇವಾ ಸಿಂಧು ತಂತ್ರಾಂಶದ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ, ಅಗತ್ಯ ದಾಖಲೆಗಳೊಂದಿಗೆ ಅರ್ಜಿಯ ಪ್ರತಿಯನ್ನು ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಕಚೇರಿಗೆ ಸಲ್ಲಿಸಬೇಕು.

# ಶಿಸ್ತು, ಪರಿಶ್ರಮವೇ ವಿದ್ಯಾರ್ಥಿ ಯಶಸ್ಸಿನ ಮೆಟ್ಟಿಲು

**ವಿಜಯಸಾಕ್ಷಿ ಸುದ್ದಿ, ಹುಲಕೋಟಿ**

ವಿದ್ಯಾರ್ಥಿ ಜೀವನ ಅತ್ಯಂತ ಅಮೂಲ್ಯವಾಗಿದ್ದು, ಶಿಸ್ತು, ಕಠಿಣ ಪರಿಶ್ರಮ ಹಾಗೂ ನಿರಂತರ ಅಧ್ಯಯನದ ಮೂಲಕ ಭವಿಷ್ಯವನ್ನು ಉಜ್ವಲಗೊಳಿಸಿಕೊಳ್ಳಬೇಕು ಎಂದು ಕಾಲೇಜು ಶಿಕ್ಷಣ ಇಲಾಖೆಯ ಧಾರವಾಡ ಪ್ರಾದೇಶಿಕ ಕಚೇರಿಯ ಜಂಟಿ ನಿರ್ದೇಶಕಿ ಡಾ. ಸುಧಾ ಕೌಜಗೇರಿ ಹೇಳಿದರು.

ಹುಲಕೋಟಿಯ ಶ್ರೀ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ 2026–27ನೇ ಸಾಲಿನ ಪ್ರಥಮ ವರ್ಷದ ವಿದ್ಯಾರ್ಥಿಗಳ ಸ್ವಾಗತ ಹಾಗೂ ವಿವಿಧ ಚಟುವಟಿ–ಕೆಗಳ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದರು.



ಕಾಲೇಜಿನೊಂದಿಗೆ ಅವಿನಾಭಾವ ಸಂಬಂಧವಿದ್ದು, ಇಲ್ಲಿನ ವಿದ್ಯಾರ್ಥಿಗಳ ಪ್ರಗತಿ ಹೆಮ್ಮೆಯ ಸಂಗತಿ ಎಂದ ಅವರು, ಕಾಲೇಜಿನ ಭೌತಿಕ ಹಾಗೂ ಬೌದ್ಧಿಕ ಅಭಿವೃದ್ಧಿಗೆ ಶ್ರಮಿಸುತ್ತಿರುವ ಬೋಧಕರ ಕಾರ್ಯವನ್ನು ಶ್ಲಾಘಿಸಿದರು.

ಮುಖ್ಯ ಅತಿಥಿ ಹುಬ್ಬಳ್ಳಿಯ ಪಿ.ಸಿ. ಜಾಬಿನ ಪದವಿಪೂರ್ವ ವಿಜ್ಞಾನ ಮಹಾವಿದ್ಯಾಲಯದ ಪ್ರಾಚಾರ್ಯ ಪ್ರೊ. ವಿಠ್ಠಲ ರಾಜಪ್ಪ ವಾಘಮೋಡಿ ಮಾತನಾಡಿ, ಪಠ್ಯದ ಜತೆಗೆ ಪಠ್ಯೇತರ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವುದರಿಂದ ವಿದ್ಯಾರ್ಥಿಗಳ ಸರ್ವಾಂಗೀಣ ವಿಕಸನ ಸಾಧ್ಯ ಎಂದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಡಾ. ಅಪ್ಪಣ್ಣ ಎನ್. ಹಂಜೆ ಅವರು ಪ್ರಥಮ ವರ್ಷದ ವಿದ್ಯಾರ್ಥಿಗಳನ್ನು ಸ್ವಾಗತಿಸಿ, ಕಾಲೇಜಿನ ಶೈಕ್ಷಣಿಕ ಶಿಸ್ತು ಹಾಗೂ ನಿಯಮಗಳಿಗೆ ಬದ್ಧರಾಗುವಂತೆ ಕರೆ ನೀಡಿದರು.

> ಶಿಸ್ತು ಮತ್ತು ಕಠಿಣ ಪರಿಶ್ರಮದ ಜತೆಗೆ ಉತ್ತಮ ಸಂಸ್ಕಾರ ಹಾಗೂ ಸಕಾರಾತ್ಮಕ ಚಿಂತನೆ ಬೆಳೆಸಿಕೊಂಡರೆ ವಿದ್ಯಾರ್ಥಿಗಳು ತಮ್ಮ ಭವಿಷ್ಯವನ್ನು ಉಜ್ವಲಗೊಳಿಸಿಕೊಳ್ಳಬಹುದು.
> – ಡಾ. ಸುಧಾ ಕೌಜಗೇರಿ

ಕಾರ್ಯಕ್ರಮದಲ್ಲಿ ಐಕ್ಯುಎಸಿ ಸಂಯೋಜಕ ಡಾ. ಜಿತೇಂದ್ರ ಜಹಾಗೀರದಾರ, ಡಾ. ಮಂಜುನಾಥ ತ್ಯಾಲಗಡಿ, ಡಾ. ಲಕ್ಷ್ಮಣ ಮುಳಗುಂದ ಸೇರಿದಂತೆ ಕಾಲೇಜಿನ ಬೋಧಕ–ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಪವಿತ್ರಾ ಬಿ.ಸಿ. ನಿರೂಪಿಸಿದರು. ಡಾ. ಸುಜಾತಾ ಬರದೂರ ವಂದಿಸಿದರು.

## ಸಿರಿಧಾನ್ಯ ಬಳಕೆಯಿಂದ ಅಪೌಷ್ಟಿಕತೆ ನಿವಾರಣೆ




**ವಿಜಯಸಾಕ್ಷಿ ಸುದ್ದಿ, ನರಗುಂದ**

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ನರಗುಂದ ತಾಲೂಕಿನ ಮೂಗನೂರು–121ನೇ ಅಂಗನವಾಡಿಯಲ್ಲಿ ಪೋಷಣ್ ಮಾಸಾಚರಣೆ ಹಾಗೂ ಬೇಟಿ ಬಚಾವೋ–ಬೇಟಿ ಪಡಾವೋ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮದಲ್ಲಿ ಕಿಶೋರಿಯ–ರಿಗೆ ಆರೋಗ್ಯ ಮತ್ತು ಪೌಷ್ಟಿಕತೆ ಕುರಿತು ಅರಿವು ಮೂಡಿಸಲಾಯಿತು. ಗರ್ಭಿಣಿಯರಿಗೆ ಸೀಮಂತ ಕಾರ್ಯಕ್ರಮ ಹಾಗೂ ರಂಗೋಲಿ ಮೂಲಕ ವಿವಿಧ ಸರ್ಕಾರಿ ಯೋಜನೆಗಳ ಕುರಿತು ಜಾಗೃತಿ ಮೂಡಿಸಲಾಯಿತು.

ಮೇಲ್ವಿಚಾರಕಿ ಶಕುಂತಲಾ ಗಣಿ ಮಾತನಾಡಿ, ಅಪೌಷ್ಟಿಕತೆ ನಿವಾರಣೆಗೆ ಸಿರಿಧಾನ್ಯಗಳ ಬಳಕೆ ಅಗತ್ಯ. ವಿಶೇಷವಾಗಿ ಕಿಶೋ–ರಿಯರ ಆರೋಗ್ಯ ಹಾಗೂ ರೋಗನಿರೋಧಕ ಶಕ್ತಿ ಹೆಚ್ಚಿಸಲು ರಾಗಿ, ನವಣೆ, ಸಜ್ಜೆ, ಹಾರಕ, ಬರಗ ಹಾಗೂ ಜೋಳದಂತಹ ಸಿರಿಧಾನ್ಯಗಳನ್ನು ಆಹಾರದಲ್ಲಿ ಬಳಸಬೇಕು ಎಂದರು.

ಉಪನ್ಯಾಸಕ ಬಿ.ಸಿ. ಹಣಮಂತಗೌಡ್ರ ಮಾತನಾಡಿ, ನಮ್ಮ ಆರೋಗ್ಯ ನಮ್ಮ ಕೈಯಲ್ಲಿದೆ. ಕಲಬೆರಕೆ ಆಹಾರದ ಪ್ರಮಾಣ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಜಾಗೃತರಾಗಬೇಕು. ಮಕ್ಕಳಿಗೆ ಆರೋಗ್ಯದ ಜೊತೆಗೆ ನೈತಿಕ ಮೌಲ್ಯಗಳನ್ನು ರೂಢಿಸಬೇಕು ಎಂದು ಸಲಹೆ ನೀಡಿದರು.

ಬಾಲ ವಿಕಾಸ ಸಮಿತಿ ಅಧ್ಯಕ್ಷೆ ಶ್ರೀದೇವಿ ತಳವಾರ, ಅಂಗನವಾಡಿ ಕಾರ್ಯಕರ್ತೆಯರಾದ ಬಸಮ್ಮ ಕ್ಯಾರಕೊಪ್ಪ, ಬಿ.ಎಸ್. ಕೊಡ್ಲಿವಾಡ, ಮಂಜುಳಾ ಪ್ರಭುಗೌಡ್ರ, ಗಂಗಮ್ಮ ನಾಯ್ಕರ, ಉಮಾ ಪೂಜಾರ, ಪೋಷಣ್ ಸಂಯೋಜಕರಾದ ಮಂಜುನಾಥ ಗುಗ್ಗರಿ, ಗೀತಾ ಮುಲ್ಲಾಳ ಸೇರಿದಂತೆ ತಾಯಂದಿರು ಹಾಗೂ ಮಕ್ಕಳು ಭಾಗವಹಿಸಿದ್ದರು.

# ಸಾಧಕರಿಗೆ 'ಶ್ರೀ ಕಾಳಿಕಾ ಸೇವಾಭೂಷಣ' ಪ್ರಶಸ್ತಿ ಪ್ರದಾನ

**ವಿಜಯಸಾಕ್ಷಿ ಸುದ್ದಿ, ಬೆಟಗೇರಿ**

ಶೈಕ್ಷಣಿಕ, ಸಾಮಾಜಿಕ ಹಾಗೂ ಧಾರ್ಮಿಕ ಕ್ಷೇತ್ರಗಳಲ್ಲಿ ಸಲ್ಲಿಸಿದ ಗಣನೀಯ ಸೇವೆಯನ್ನು ಗುರುತಿಸಿ ಕೆ.ಡಿ. ಬಡಿಗೇರ, ಶಿವಲೀಲಾ ಕೆ. ಬಡಿಗೇರ ಹಾಗೂ ವಿರೂಪಾಕ್ಷಪ್ಪ ಪೋತದಾರ ಅವರಿಗೆ 'ಶ್ರೀ ಕಾಳಿಕಾ ಸೇವಾಭೂಷಣ' ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಾಯಿತು.

ಬೆಟಗೇರಿ ವಿಶ್ವಕರ್ಮ ಸಮಾಜ ಹಾಗೂ ಕಾಳಿಕಾ ದೇವಸ್ಥಾನ ಟ್ರಸ್ಟ್ ಕಮಿಟಿ ವತಿಯಿಂದ ಆಯೋಜಿಸಿದ್ದ ವಿಶ್ವಕರ್ಮ ಮಹೋತ್ಸವ ಹಾಗೂ ಶಿಕ್ಷಕರ ದಿನಾಚರಣೆ ಸಮಾರಂಭದಲ್ಲಿ ಮೂವರು ಸಾಧಕರಿಗೆ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು. ಇಂಡಿ ವಿಶ್ವಕರ್ಮ ವಿಕಾಸ ಸಂಸ್ಥೆಯ ವತಿಯಿಂದ ಶೈಕ್ಷಣಿಕ, ಸಾಮಾಜಿಕ ಹಾಗೂ ಧಾರ್ಮಿಕ ಕ್ಷೇತ್ರದಲ್ಲಿ ಗಮನಾರ್ಹ ಸೇವೆ ಸಲ್ಲಿಸಿದ ಸಾಧಕರಿಗೆ ನೀಡಲಾಗುವ 'ಶ್ರೀ ಕಾಳಿಕಾ ಸೇವಾಭೂಷಣ' ಪ್ರಶಸ್ತಿಗೆ ಈ ಮೂವರನ್ನು ಆಯ್ಕೆ ಮಾಡಲಾಗಿತ್ತು.



ಗದಗ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ ಉಪನಿರ್ದೇಶಕ (ಅಭಿವೃದ್ಧಿ) ಕೆ.ಡಿ. ಬಡಿಗೇರ ಅವರು ಯಾದಗಿರಿ, ಕೊಪ್ಪಳ ಹಾಗೂ ಗದಗ ಜಿಲ್ಲೆಗಳ ಅಭಿವೃದ್ಧಿ ವಿಭಾಗದ ಉಪನಿರ್ದೇಶಕರಾಗಿ ಹಾಗೂ ಬಾಗಲಕೋಟೆ–ರಾಯಚೂರು ಜಿಲ್ಲಾ ಶಾಲಾ ಶಿಕ್ಷಣ ಇಲಾಖೆಯ ಆಡಳಿತ ವಿಭಾಗದ ಉಪನಿರ್ದೇಶಕರಾಗಿ ದಕ್ಷತೆ, ಪ್ರಾಮಾಣಿಕತೆ ಹಾಗೂ ಸಮಥ–ರ್ತೆಯಿಂದ ಸೇವೆ ಸಲ್ಲಿಸಿದ್ದಾರೆ. ಇಲಾಖೆಯ ಗೌರವ ಹೆಚ್ಚಿಸುವ ಜತೆಗೆ ಜನಪ್ರತಿನಿಧಿಗಳು, ಮೇಲಾಧಿಕಾರಿಗಳು ಹಾಗೂ ಸಿಬ್ಬಂದಿಯ ಮೆಚ್ಚುಗೆಗೆ ಪಾತ್ರರಾಗಿರುವುದನ್ನು ಗುರುತಿಸಿ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.

ಶಿವಲೀಲಾ ಕೆ. ಬಡಿಗೇರ ಅವರು ಗದಗ ಜಿಲ್ಲಾ ವಿಶ್ವಕರ್ಮ ಮಹಿಳಾ ಸಂಘದ ಸಂಸ್ಥಾಪಕ ಅಧ್ಯಕ್ಷೆಯಾಗಿ ವಿಶ್ವಕರ್ಮ ಭವನ ನಿರ್ಮಾಣದಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ. ಮಹಿಳಾ ದಿನಾಚರಣೆ, ಆರೋಗ್ಯ ಶಿಬಿರ, ಧಾರ್ಮಿಕ ಕ್ಷೇತ್ರಗಳ ದರ್ಶನ ಹಾಗೂ ರಕ್ತದಾನ ಶಿಬಿರ ಸೇ–ರಿದಂತೆ ಹಲವು ಸಮಾಜಮುಖಿ ಕಾರ್ಯಕ್ರಮಗಳ ಮೂಲಕ ಸಂಘಟನೆಯನ್ನು ಕ್ರಿಯಾಶೀಲವಾಗಿ ಮುನ್ನಡೆಸಿದ್ದಾರೆ.

ವಿರೂಪಾಕ್ಷಪ್ಪ ಪೋತದಾರ ಅವರು ದಸ್ತು ಬರಹಗಾರರಾಗಿ ಸೇವೆ ಸಲ್ಲಿಸುವುದರ ಜೊತೆಗೆ ರೋಣ ವಿಶ್ವಕರ್ಮ ಸಮಾಜ ಸಂಘಟನೆಯ ಮೂಲಕ ಸಕ್ರಿಯವಾಗಿ ತೊಡಗಿಸಿಕೊಂಡು ಧಾರ್ಮಿಕ ಹಾಗೂ ಸಾಮಾಜಿ–ಕ ಕಾರ್ಯಕ್ರಮಗಳ ಮೂಲಕ ಸಮಾಜ ಬಾಂಧವರ ಮೆಚ್ಚುಗೆಗೆ ಪಾತ್ರರಾಗಿದ್ದಾರೆ. ಟ್ರಸ್ಟ್ ಕಮಿಟಿ ಪ್ರಧಾನ ಕಾರ್ಯದರ್ಶಿ ಎನ್.ಐ. ಪತ್ತಾರ ಅಧ್ಯಕ್ಷತೆ ವಹಿಸಿದ್ದರು. ಟ್ರಸ್ಟ್ ಅಧ್ಯಕ್ಷ ಶ್ರೀಧರ ಕೊಣ್ಣೂರ ಉಪಸ್ಥಿತರಿದ್ದರು. ಗದಗ ಡೈಟ್ ಉಪನ್ಯಾಸಕ ಜಿ.ಡಿ. ದಾಸರ, ಗದಗ ಗ್ರಾಮೀಣ ವಲಯದ ಬಿಇಒ ಕಚೇರಿಯ ಶಿಕ್ಷಣ ಸಂಯೋಜ–ಕ ಬಿ.ವೈ. ಡೊಳ್ಳಿನ ಅತಿಥಿಗಳಾಗಿ ಪಾಲ್ಗೊಂಡಿದ್ದರು.

ದೇವಸ್ಥಾನದ ಸಾಂಸ್ಕೃತಿಕ ಸಂಚಾಲಕ ವಿಶ್ವನಾಥ ಕಮ್ಮಾರ, ಮಂಜುನಾಥ ಅಕ್ಕಸಾಲಿ, ಶ್ರೀಧರ ತೋಟಗಂಟಿ, ಸುರೇಶ ತೋಟಗಂಟಿ, ನಿಂಗರಾಜ ಪತ್ತಾರ, ಸತೀಶ ಹೊರಪೇಟ, ಎಸ್.ಎನ್. ಬಡಿಗೇರ, ಅಶೋಕ ಪತ್ತಾರ, ಆನಂದ ಕಮ್ಮಾರ, ಮಾಲತೇಶ ಬಡಿಗೇರ, ರವಿ ಬಡಿಗೇರ, ನಾಗರಾಜ ಕಮ್ಮಾರ ಸೇ–ರಿದಂತೆ ವಿಶ್ವಕರ್ಮ ಸಮಾಜದ ಮುಖಂಡರು ಹಾಗೂ ಮಹಿಳಾ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಪೌರಕಾರ್ಮಿಕರ ಹಕ್ಕುಗಳಿಗಾಗಿ ಹೋರಾಡಿದ ನಾಯಕರಿಗೆ ಮಾಲಾರ್ಪಣೆ



**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ–ಬೆಟಗೇರಿ ನಗರಸಭೆ ವತಿಯಿಂದ 15ನೇ ಪೌರಕಾರ್ಮಿಕರ ದಿನಾಚರಣೆ ಅಂಗವಾಗಿ ಸೆ.23ರಂದು ವಿವಿಧ ಕಾರ್ಯ ಕ್ರಮಗಳು ಜರುಗಿದವು.

ಈ ಸಂದರ್ಭದಲ್ಲಿ ಶೋಷಿತ ವರ್ಗದ ಹಕ್ಕುಗಳಿಗಾಗಿ ಹೋರಾಡುತ್ತಿರುವ ಗದಗ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಕೃಷ್ಣಗೌಡ ಎಚ್. ಪಾಟೀಲ ಅವರು ಡಾ. ಬಿ.ಆರ್. ಅಂಬೇಡ್ಕರ್ ಪುತ್ಥಳಿ ಆವರಣದ ಎದುರು ಪೌರಕಾರ್ಮಿಕರ ಹಕ್ಕುಗಳಿಗಾಗಿ ಹೋರಾಡಿದ ಧೀಮಂತ ನಾಯಕರಾದ ಬಿ. ಬಸಲಿಂಗಪ್ಪ ಹಾಗೂ ಐಪಿಡಿ ಸಾಲಪ್ಪ ಅವರ ಭಾವಚಿತ್ರಗಳಿಗೆ ಮಾಲಾರ್ಪಣೆ ಮಾಡಿ ಗೌರವ ನಮನ ಸಲ್ಲಿಸಿದರು. ಬಳಿಕ ಪೌರಕಾರ್ಮಿಕರಿಗೆ ದಿನಾಚರಣೆಯ ಶುಭಾಶಯಗಳನ್ನು ತಿಳಿಸಿದರು.

ಕಾರ್ಯಕ್ರಮದಲ್ಲಿ ನಗರಸಭಾ ಸದಸ್ಯ ಕೃಷ್ಣ ಪರಾಪುರ, ಗದಗ–ಬೆಟಗೇರಿ ನಗರಸಭೆ ಪೌರಾಯುಕ್ತ ರಾಜಾರಾಮ್ ಪವಾರ್, ಪರಿಸರ ಅಭಿಯಂತರ ಬದಿ, ನಗರಸಭೆ ಅಧೀಕ್ಷಕ ಶೇರಖಾನೆ, ಪೃಥ್ವಿ ಪರಾಪುರ, ಯುವರಾಜ ಬಳ್ಳಾರಿ, ಗೋವಿಂದರಾಜ ಬಳ್ಳಾರಿ, ವಿಜಯ್ ಕಲ್ಮನಿ, ಮಲ್ಲಿಕ್ ಸಂಗಾಪುರ, ಪರಶುರಾಮ ಪೂಜಾರ, ಹನಮಂತ ದೊಡ್ಡಮನಿ, ಮೃತ್ಯುಂಜಯ ದೊಡ್ಡಮನಿ, ವಿಶ್ವನಾಥ ದೊಡ್ಡಮನಿ ಸೇ–ರಿದಂತೆ ಪೌರಕಾರ್ಮಿಕರು ಹಾಗೂ ಮಹಿಳಾ ಕಾರ್ಮಿಕರು ಉಪಸ್ಥಿತರಿದ್ದರು.

## ತಂಬ್ರಹಳ್ಳಿ ಹೋಬಳಿ ರೈತ ಸಂಘಕ್ಕೆ ನೂತನ ಪದಾಧಿಕಾರಿಗಳ ಆಯ್ಕೆ



**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ತಾಲೂಕಿನ ತಂಬ್ರಹಳ್ಳಿ ಗ್ರಾಮದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವಿಜಯನಗರ ಜಿಲ್ಲಾ ಘಟಕದ ನೇತೃತ್ವದಲ್ಲಿ ಸೆ.23ರಂದು ತಂಬ್ರಹಳ್ಳಿ ಹೋಬಳಿಯ ಉತ್ತರ ಭಾಗದ ಬೋರ್ಡ್ ಉದ್ಘಾಟನೆ ಹಾಗೂ ರೈತ ಸಂಘದ ನೂತನ ಪದಾಧಿಕಾರಿಗಳ ಆಯ್ಕೆ ಕಾರ್ಯಕ್ರಮ ನಡೆಯಿತು.

ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವಿಜಯನಗರ ಜಿಲ್ಲಾಧ್ಯಕ್ಷ ಸಿ.ಎ. ಗಾಳೆಪ್ಪ ಅವರ ಅಧ್ಯಕ್ಷತೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ತಂಬ್ರ ಹಳ್ಳಿ ಹೋಬಳಿಯ ಉತ್ತರ ಭಾಗದ ಅಧ್ಯಕ್ಷರಾಗಿ ರವಿ ಅವರನ್ನು ಆಯ್ಕೆ ಮಾಡಿ ಆದೇಶ ಪತ್ರ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಹಗ–ರಿಬೊಮ್ಮನಹಳ್ಳಿ ತಾಲೂಕಿನ ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಅಕ್ಕಿ ತೋಟೇಶ್, ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಕೊಟ್ರೇಶ್, ತಾಲೂಕು ಘಟಕದ ಅಧ್ಯಕ್ಷ ರಮೇಶ್, ತಂಬ್ರಹಳ್ಳಿ ಹೋಬಳಿ ಗೌರವಾಧ್ಯಕ್ಷ ದುರುಗಪ್ಪ, ಹೋಬಳಿ ಘಟಕದ ಅಧ್ಯಕ್ಷ ಮಲ್ಲಿಕಾರ್ಜುನ, ಕಿತ್ನೂರು ಗ್ರಾಮ ಘಟಕದ ಅಧ್ಯಕ್ಷ ಪರಶುರಾಮ್, ಮೈಲಾರಪ್ಪ ಸೇರಿದಂತೆ ರೈತ ಸಂಘದ ಮುಖಂಡರು ಹಾಗೂ ಸರ್ವ ಸದಸ್ಯರು ಉಪಸ್ಥಿತ–ರಿದ್ದರು.

ರೈತರ ಸಮಸ್ಯೆಗಳು, ಹಕ್ಕುಗಳು ಹಾಗೂ ಕೃಷಿ ಸಂಬಂಧಿತ ವಿಚಾರಗಳ ಕುರಿತು ಸಂಘಟನಾತ್ಮಕವಾಗಿ ಹೋರಾಟ ನಡೆಸುವ ನಿಟ್ಟಿನಲ್ಲಿ ನೂತನ ಪದಾಧಿಕಾರಿಗಳ ಆಯ್ಕೆ ಮಾಡಲಾಗಿದೆ.

## ಎಸ್‌ಐಆರ್ ಎಫೆಕ್ಟ್: ಮತದಾರರ ಪಟ್ಟಿಯಲ್ಲಿ ಭಾರಿ ಪರಿಶೀಲನೆ

# 47,919 ನೋಟಿಸ್ ವಿತರಣೆ; 32,018 ಮತದಾರರ ವಿಚಾರಣೆ ಪೂರ್ಣ

**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ (ಎಸ್‌ಐಆರ್)-2026ರ ಪ್ರಕ್ರಿಯೆ ಜಿಲ್ಲೆಯಲ್ಲಿ ಚುರುಕುಗೊಂಡಿದ್ದು, ಮತದಾರರು ತಮ್ಮ ಹೆಸರು ಮತದಾರರ ಪಟ್ಟಿಯಲ್ಲಿ ಇರುವುದನ್ನು ಖಚಿತಪಡಿಸಿಕೊಳ್ಳಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಸ್ನೇಹಲ್ ಆರ್. ತಿಳಿಸಿದ್ದಾರೆ.

ಕಚೇರಿ ಸಭಾಭವನದಲ್ಲಿ ಗುರುವಾರ ನಡೆದ ಎಸ್‌ಐಆರ್ ಕುರಿತ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸೆ.19 ಮತ್ತು 20ರಂದು ನಡೆದ ವಿಶೇಷ ಆಂದೋಲನದಲ್ಲಿ ವಿವಿಧ ನಮೂನೆಗಳಲ್ಲಿ ಒಟ್ಟು 7,572 ಅರ್ಜಿಗಳು ಸ್ವೀಕೃತವಾಗಿವೆ ಎಂದು ತಿಳಿಸಿದರು. ಈ ಪೈಕಿ ನಮೂನೆ-6ರಲ್ಲಿ 5,324, ನಮೂನೆ-6ಎರಲ್ಲಿ 26, ನಮೂನೆ-7ರಲ್ಲಿ 98 ಹಾಗೂ ನಮೂನೆ-8ರಲ್ಲಿ 2,124 ಅರ್ಜಿಗಳು ಸಲ್ಲಿಕೆಯಾಗಿವೆ.

.20ರಂದು ನಡೆದ ವಿಶೇಷ ಆಂದೋಲನದಲ್ಲಿ ಮಾತ್ರ



ನಮೂನೆ-6ರಲ್ಲಿ 1,490, ನಮೂನೆ-6ಎರಲ್ಲಿ 21, ನಮೂನೆ-7ರಲ್ಲಿ 38 ಹಾಗೂ ನಮೂನೆ-8ರಲ್ಲಿ 765 ಅರ್ಜಿಗಳು ಸ್ವೀಕೃತವಾಗಿವೆ.

> ಪ್ರತಿಯೊಬ್ಬ ಮತದಾರರೂ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು ಇರುವುದನ್ನು ಖಚಿತಪಡಿಸಿಕೊಳ್ಳಬೇಕು. ಹೆಸರು ಅಥವಾ ಮಾಹಿತಿಯಲ್ಲಿ ಯಾವುದೇ ವ್ಯತ್ಯಾಸವಿದ್ದರೆ ಸಂಬಂಧಪಟ್ಟ ಅಧಿಕಾರಿಗಳನ್ನು ಸಂಪರ್ಕಿಸಿ ಅಗತ್ಯ ತಿದ್ದುಪಡಿ ಮಾಡಿಸಿಕೊಳ್ಳಬೇಕು.
>
> – ಸ್ನೇಹಲ್ ಆರ್., ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ

ಜಿಲ್ಲೆಯಲ್ಲಿ ಇದುವರೆಗೆ 47,937 ನೋಟಿಸ್‌ಗಳನ್ನು ಸೃಜಿಸಲಾಗಿದ್ದು, 47,919 ನೋಟಿಸ್‌ಗಳನ್ನು ಸಾರ್ವಜನಿಕರಿಗೆ ತಲುಪಿಸಲಾಗಿದೆ. ನೋಟಿಸ್ ಪಡೆದವರ ಪೈಕಿ 32,018 ಮತದಾರರ ವಿಚಾರಣೆ ಪೂರ್ಣಗೊಂಡಿದೆ. ವಿಚಾರಣೆಗೆ ಹಾಜರಾಗದ 9,114 ಮತದಾರರಿಗೆ ಎರಡನೇ ಅವಕಾಶ ನೀಡಲಾಗುತ್ತಿದ್ದು, ಅಗತ್ಯ ದಾಖಲೆಗಳೊಂದಿಗೆ ತಮ್ಮ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳುವಂತೆ ಸೂಚಿಸಲಾಗಿದೆ.

6,549 ಪ್ರಕರಣಗಳು ಬಾಕಿ ಇದ್ದು, 21,786 ಅರ್ಜಿಗಳನ್ನು ಅಂತಿಮ ನಿಯಮ ಪ್ರಕ್ರಿಯೆಗೆ ಕಳುಹಿಸಲಾಗಿದೆ. ಅಂತಿಮ ಪ್ರಕಟಣೆಗಾಗಿ 11,80,631 ಮತದಾರರ ವಿವರಗಳನ್ನು ಸಿದ್ಧಪಡಿಸಲಾಗಿದೆ ಎಂದು ಜಿಲ್ಲಾಧಿಕಾರಿ ಮಾಹಿತಿ ನೀಡಿದರು.

ಮತದಾರರ ಸಮಸ್ಯೆಗಳನ್ನು ತ್ವರಿತವಾಗಿ ಪರಿಹರಿಸಲು ಸಹಾಯಕ ಮತದಾರರ ನೋಂದಣಿ ಅಧಿಕಾರಿಗಳ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸಲಾಗಿದೆ. ಈ ಹಿಂದೆ 67 ಅಧಿಕಾರಿಗಳು ಕಾರ್ಯನಿರ್ವಹಿಸುತ್ತಿದ್ದರೆ, ಇದೀಗ ಹೆಚ್ಚುವರಿ ಅಧಿಕಾರಿಗಳೊಂದಿಗೆ ಒಟ್ಟು 78 ಅಧಿಕಾರಿಗಳು ಕಾರ್ಯನಿರ್ವಹಿಸುತ್ತಿದ್ದಾರೆ. ತಾಲೂಕು ಹಾಗೂ ನಗರ ವಾರ್ಡ್ ಮಟ್ಟದಲ್ಲಿ ಲಭ್ಯವಿರುವ ಅಧಿಕಾರಿಗಳನ್ನು ಸಂಪರ್ಕಿಸಿ ಹೆಸರು ಸೇರ್ಪಡೆ, ತಿದ್ದುಪಡಿ, ಅಳಿಸುವಿಕೆ ಸೇರಿದಂತೆ ಮತದಾರರ ಪಟ್ಟಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಪರಿಹರಿಸಿಕೊಳ್ಳಬಹುದು ಎಂದು ತಿಳಿಸಿದರು. ಪತ್ರಿಕಾಗೋಷ್ಠಿಯ ಬಳಿಕ ವಿವಿಧ ರಾಜಕೀಯ ಪಕ್ಷಗಳ ಮುಖಂಡರ ಸಭೆಯೂ ನಡೆಯಿತು. ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಆಯುಕ್ತ ಡಾ. ರುದ್ರೇಶ ಘಾಳಿ, ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ., ಉಪವಿಭಾಗಾಧಿಕಾರಿ ಪ್ರಭಾವತಿ ಪಕೀರಪುರ ಸೇರಿದಂತೆ ಸಂಬಂಧಪಟ್ಟ ಅಧಿಕಾರಿಗಳು ಉಪಸ್ಥಿತರಿದ್ದರು.

---

## ರೈತರ ಆರ್ಥಿಕ ಸದೃಢತೆಗೆ ಸಹಕಾರಿ ಸಂಘಗಳು ಬಲ




**ವಿಜಯಸಾಕ್ಷಿ ಸುದ್ದಿ, ಮುಳಗುಂದ**

ರೈತರು ಆರ್ಥಿಕವಾಗಿ ಸದೃಢರಾಗಲು ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘಗಳು ಪ್ರಮುಖ ಪಾತ್ರ ವಹಿಸುತ್ತವೆ ಎಂದು ಕುರ್ತಕೋಟಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ಮಾಜಿ ಅಧ್ಯಕ್ಷ ಡಿ.ಪಿ. ಪಾಟೀಲ ಹೇಳಿದರು.

ಮುಳಗುಂದ ಸಮೀಪದ ಕುರ್ತಕೋಟಿ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ 117ನೇ ವಾರ್ಷಿಕ ಮಹಾಸಭೆಯಲ್ಲಿ ಮಾತನಾಡಿದ ಅವರು, ಸಂಘವು 117 ವರ್ಷಗಳನ್ನು ಪೂರೈಸಿ 118ನೇ ವರ್ಷಕ್ಕೆ ಕಾಲಿಡುತ್ತಿದ್ದು, 2025-26ನೇ ಸಾಲಿನಲ್ಲಿ ₹15.20 ಲಕ್ಷ ನಿವ್ವಳ ಲಾಭ ಗಳಿಸಿದೆ. ಸಂಘದ ಈ ಸಾಧನೆಗೆ ರೈತ ಸದಸ್ಯರ ಸಹಕಾರವೇ ಪ್ರಮುಖ ಕಾರಣ ಎಂದರು.

ರೈತರ ಆರ್ಥಿಕ ಅಭಿವೃದ್ಧಿಯ ಉದ್ದೇಶದಿಂದ ಸಂಘವು ಹಲವು ವರ್ಷಗಳಿಂದ ಸದಸ್ಯರಿಗೆ ಅಗತ್ಯ ಸಹಕಾರ ನೀಡುತ್ತಾ ಬಂದಿದ್ದು, ಮುಂದಿನ ದಿನಗಳಲ್ಲಿಯೂ ಸಂಘವನ್ನು ಮತ್ತಷ್ಟು ಉನ್ನತ ಮಟ್ಟಕ್ಕೆ ಕೊಂಡೊಯ್ಯಲು ಎಲ್ಲ ಸದಸ್ಯರ ಸಹಕಾರ ಅಗತ್ಯವಾಗಿದೆ.

ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘಗಳ ಸೌಲಭ್ಯಗಳನ್ನು ರೈತರು ಸದುಪ ಯೋಗಪಡಿಸಿಕೊಂಡು ಆರ್ಥಿಕವಾಗಿ ಅಭಿವೃದ್ಧಿ ಹೊಂದಬೇಕು ಎಂದು ಹೇಳಿದರು.

ಶೇಖರಯ್ಯ ಹೊಸಮಠ ಮಾತನಾಡಿ, ಸಂಘದ ಅಭಿವೃದ್ಧಿಯಲ್ಲಿ ಪ್ರತಿಯೊಬ್ಬ ಸದಸ್ಯರ ಸಹಕಾರ ಮಹತ್ವದ್ದಾಗಿದೆ.

ರೈತರ ಏಳಿಗೆಗಾಗಿ ಸಂಘ ಶ್ರಮಿಸುತ್ತಿರುವುದು ಶ್ಲಾಘನೀಯವಾಗಿದ್ದು, ರೈತರು ಇದರ ಸೌಲಭ್ಯಗಳನ್ನು ಪಡೆದುಕೊಳ್ಳಬೇಕು ಎಂದರು.

ಸಭೆಯಲ್ಲಿ ನಿಧನರಾದ ಸಂಘದ ಸದಸ್ಯರಿಗೆ ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಿ ಮೌನಾಚರಣೆ ಮಾಡಲಾಯಿತು. ಸಂಘದ ಅಧ್ಯಕ್ಷ ಮಲ್ಲಪ್ಪ ಹೊಸಮನಿ ಅಧ್ಯಕ್ಷತೆ ವಹಿಸಿದ್ದರು. ಉಪಾಧ್ಯಕ್ಷ ಬಸವರಾಜ ಮಿಶೇಣ್ಣವರ, ನಿರ್ದೇಶಕರು, ಮುಖ್ಯ ಕಾರ್ಯನಿರ್ವಾಹಕ ಬಸವರಾಜ ಮಣ್ಣೂರ ಸೇರಿದಂತೆ ಸಂಘದ ಸದಸ್ಯರು ಉಪಸ್ಥಿತರಿದ್ದರು.

---

## ಶಿಕ್ಷಕ ಮರಿದೇವರಮಠಗೆ ಈಶ್ವರ ಗುರುರತ್ನ ಪ್ರಶಸ್ತಿ




**ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಹುಲಕೋಟಿಯ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯ ಹಾಗೂ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಗ್ರಾಮೀಣ ಘಟಕ, ಗದಗ ಇವರ ಸಂಯುಕ್ತ ಆಶ್ರಯದಲ್ಲಿ ಮುಳಗುಂದದ ಸರ್ಕಾರಿ ಮಾದರಿ ಕನ್ನಡ ಹೆಣ್ಣುಮಕ್ಕಳ ಪ್ರಾಥಮಿಕ ಶಾಲೆಯ ಸಹ ಶಿಕ್ಷಕ ಪಿ.ಎಸ್. ಮರಿದೇವರಮಠ ಅವರಿಗೆ 'ಈಶ್ವರ ಗುರುರತ್ನ' ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಶಿಕ್ಷಣ ಕ್ಷೇತ್ರದಲ್ಲಿ ಸಲ್ಲಿಸಿದ ಸೇವೆಯನ್ನು ಗುರುತಿಸಿ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾ ಅಧ್ಯಕ್ಷ ವಿ.ಎಂ. ಹಿರೇಮಠ, ತಾಲೂಕು ಅಧ್ಯಕ್ಷ ಎಸ್.ಆರ್. ಬಂಡಿ, ಶಿಕ್ಷಕರ ಸಂಘದ ಸದಸ್ಯರು, ಶೋಭಾ ಪಾಟೀಲ, ಬಸಮ್ಮ ಲದ್ದಿ, ರೇಣುಕಾ ಪರ್ವತಗೌಡರ ಹಾಗೂ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಪ್ರತಿನಿಧಿಗಳು ಉಪಸ್ಥಿತರಿದ್ದರು.

---

## ಉತ್ತಮ ಶಿಕ್ಷಕ ಪ್ರಶಸ್ತಿ ಪುರಸ್ಕೃತ ಕೊಟ್ರೇಶ ಅರವಟಗಿಮಠಗೆ ಸನ್ಮಾನ

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಗದಗ ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿಗೆ ಭಾಜನರಾದ ಕಣಗಿನಹಾಳದ ಮುರಾರ್ಜಿ ದೇಸಾಯಿ ವಸತಿ ಶಾಲೆಯ ವಿಜ್ಞಾನ ಶಿಕ್ಷಕ ಕೊಟ್ರೇಶ ಅರವಟಗಿಮಠ ಅವರನ್ನು ಎಂಸಿಎಸ್ ಗೆಳೆಯರ ಬಳಗದ ವತಿಯಿಂದ ಸನ್ಮಾನಿಸಲಾಯಿತು.

ಪಟ್ಟಣದ ಎಂಸಿಎಸ್ ಗೆಳೆಯರ ಬಳಗದ 4ನೇ ವರ್ಷದ ವಾರ್ಷಿಕೋತ್ಸವದ ಅಂಗವಾಗಿ ಗುರುವಾರ ಕೊಡಿಕೊಪ್ಪದ ಹಠಯೋಗಿ ವೀರಪ್ಪಜ್ಜನ ಮಠದಲ್ಲಿ ಕಾರ್ಯಕ್ರಮ ಆಯೋಜಿಸಲಾಗಿತ್ತು. ಈ ವೇಳೆ ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಪಡೆದ ಕೊಟ್ರೇಶ ಅರವಟಗಿಮಠ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಶಿಕ್ಷಣ ಕ್ಷೇತ್ರದಲ್ಲಿ ಸಲ್ಲಿಸಿದ ಸೇವೆ ಹಾಗೂ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ನೀಡಿದ ಕೊಡುಗೆಯನ್ನು ಗುರುತಿಸಿ ಅವರಿಗೆ ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ದೊರೆತ ಹಿನ್ನೆಲೆಯಲ್ಲಿ ಈ ಗೌರವ ಸಲ್ಲಿಸಲಾಯಿತು.

ಕಾರ್ಯಕ್ರಮದಲ್ಲಿ ಡಾ. ಕೃಷ್ಣ ಕಾಳೆ, ಅನ್ನದಾನೇಶ್ವರ ಮರಡಿಮಠ, ಆನಂದ ಕೋಟಗಿ, ವಿಜಯ ಕೊಕಣಿ, ಮಂಜುನಾಥ ಧರ್ಮಾಯತ, ಅಂದಪ್ಪ ಮಡಿವಾಳರ, ಬಸವರಾಜ ಹುಲಕೋಟಿ, ರಮೇಶ ಗೆದಗೇರಿ, ಹನಮಂತ ಚಳ್ಳಮರದ, ಮಂಜುನಾಥ ಜುಟ್ಲ, ನರೇಶ ಜೋಳದ ಸೇರಿದಂತೆ ಗೆಳೆಯರ ಬಳಗದ ಸದಸ್ಯರು ಹಾಗೂ ಗಣ್ಯರು ಉಪಸ್ಥಿತರಿದ್ದರು.

---

## ಗಾಂಧಿ ಜಯಂತಿ, ರಾಜ್ಯೋತ್ಸವಕ್ಕೆ ಬೆಟಗೇರಿಯಲ್ಲಿ ಸಿದ್ಧತೆ

**ವಿಜಯಸಾಕ್ಷಿ ಸುದ್ದಿ, ಬೆಟಗೇರಿ**

ಗಾಂಧಿ ಜಯಂತಿ ಹಾಗೂ ಕರ್ನಾಟಕ ರಾಜ್ಯೋತ್ಸವವನ್ನು ಅರ್ಥಪೂರ್ಣವಾಗಿ ಆಚರಿಸಲು ಬೆಟಗೇರಿ ರಾಜ್ಯೋತ್ಸವ ಸಮಿತಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಶ್ರೀ ಮಹಾರಾಣಾ ಪ್ರತಾಪಸಿಂಹ ಶಿಕ್ಷಣ ಸಂಸ್ಥೆ ಹಾಗೂ ಸಾರ್ವಜನಿಕರ ಸಹಯೋಗದಲ್ಲಿ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲು ನಿರ್ಧರಿಸಲಾಯಿತು. ಸೆ.24ರಂದು ಬಾಷೆಲ್ ಮಿಷನ್ ಪ್ರೌಢಶಾಲೆಯಲ್ಲಿ ನಡೆದ ಬೆಟಗೇರಿಯ ಶಾಲಾ-ಕಾಲೇಜುಗಳ ಶಿಕ್ಷಕರು ಹಾಗೂ ರಾಜ್ಯೋತ್ಸವ ಸಮಿತಿ ಸದಸ್ಯರ ಸಂಯುಕ್ತ ಸಭೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಯಿತು. ಅ.2ರಂದು ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಜಯಂತಿ ಅಂಗವಾಗಿ ಹೊಸಪೇಟ ಚೌಕದಲ್ಲಿರುವ ಗಾಂಧಿ ಗುಡಿ ಆವರಣದಲ್ಲಿ ಪ್ರಾರ್ಥನಾ ಸಭೆ ಆಯೋಜಿಸಲಾಗುವುದು. ನ.1ರಂದು ಕರ್ನಾಟಕ ರಾಜ್ಯೋತ್ಸವದ ಅಂಗವಾಗಿ ತಾಯಿ ಭುವನೇಶ್ವರಿ ಭಾವಚಿತ್ರದ ಮೆರವಣಿಗೆ ನಡೆಸಲಾಗುವುದು. ಇದರ ಅಂಗವಾಗಿ ಪ್ರಾಥಮಿಕ, ಪ್ರೌಢ ಹಾಗೂ ಪದವಿಪೂರ್ವ ವಿದ್ಯಾರ್ಥಿಗಳು ಮತ್ತು ಶಿಕ್ಷಕ-ಶಿಕ್ಷಕಿಯರಿಗೆ ವಿವಿಧ ಸ್ಪರ್ಧೆಗಳನ್ನು ಏರ್ಪಡಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಬಾಷೆಲ್ ಮಿಷನ್ ಪ್ರೌಢಶಾಲೆಯ ಮುಖ್ಯೋಪಾಧ್ಯಾಯಿನಿ ಜೆಸಿಕಾ ಡಿಕ್ರೋಸ್ ಮಾತನಾಡಿ, ಪ್ರತಿ ವರ್ಷ ವಿದ್ಯಾರ್ಥಿಗಳಿಗೆ ವಿಶೇಷ ಕಾರ್ಯಕ್ರಮಗಳನ್ನು ಆಯೋಜಿಸುತ್ತಿರುವುದು ಶ್ಲಾಘನೀಯ. ಇಂತಹ ಕಾರ್ಯಕ್ರಮಗಳು ವಿದ್ಯಾರ್ಥಿಗಳಲ್ಲಿ ನಾಡು-ನುಡಿಯ ಬಗ್ಗೆ ಅಭಿಮಾನ ಬೆಳೆಸಲು ಸಹಕಾರಿಯಾಗುತ್ತವೆ ಎಂದರು.

ರಾಜ್ಯೋತ್ಸವ ಸಮಿತಿ ಅಧ್ಯಕ್ಷ ಗಣೇಶಸಿಂಗ್ ಬ್ಯಾಳಿ ಸ್ವಾಗತಿಸಿ, ಉದ್ದೇಶಿತ ಕಾರ್ಯಕ್ರಮಗಳ ಕುರಿತು ಮಾಹಿತಿ ನೀಡಿದರು. ನಿವೃತ್ತ ಮುಖ್ಯಾಧ್ಯಾಪಕ ಡಿ.ಎಸ್. ಬಾಪೂರೆ ವಂದಿಸಿದರು. ಸಭೆಯಲ್ಲಿ ಬೆಟಗೇರಿಯ ವಿವಿಧ ಶಾಲಾ-ಕಾಲೇಜುಗಳ ಶಿಕ್ಷಕ-ಶಿಕ್ಷಕಿಯರು ಹಾಗೂ ರಾಜ್ಯೋತ್ಸವ ಸಮಿತಿ ಸದಸ್ಯರಾದ ಆಂಜನೇಯ ಗುಂತಕಲ್ಲ, ಭೋಜಪ್ಪ ಹೆಗ್ಗಡಿ, ಟಿ.ಎಂ. ದಂಡಗಿ, ಎಂ.ಟಿ. ಕಬ್ಬಿಣ ಸೇರಿದಂತೆ ಹಲವರು ಉಪಸ್ಥಿತರಿದ್ದರು.



---

## ಐತಿಹಾಸಿಕ ಸ್ಮಾರಕಗಳು ಇತಿಹಾಸದ ಜೀವಂತ ಸಾಕ್ಷಿಗಳು

**ವಿಜಯಸಾಕ್ಷಿ ಸುದ್ದಿ, ಮುಳಗುಂದ**




ಐತಿಹಾಸಿಕ ಸ್ಮಾರಕಗಳು ನಮ್ಮ ಇತಿಹಾಸದ ಜೀವಂತ ಸಾಕ್ಷಿಗಳಾಗಿದ್ದು, ಅವುಗಳ ವೀಕ್ಷಣೆಯಿಂದ ವಿದ್ಯಾರ್ಥಿಗಳಿಗೆ ಇತಿಹಾಸದ ಕುರಿತು ಹೆಚ್ಚಿನ ಅರಿವು ಮೂಡುತ್ತದೆ ಎಂದು ಆರ್.ಎನ್. ದೇಶಪಾಂಡೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಚಾರ್ಯ ಡಾ. ಆರ್.ಎಂ. ಕಲ್ಲನಗೌಡ್ರ ಹೇಳಿದರು.

ಮುಳಗುಂದದ ಆರ್.ಎನ್. ದೇಶಪಾಂಡೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ವತಿಯಿಂದ ಆಯೋಜಿಸಿದ್ದ 'ನಮ್ಮ ನಡೆ ಐತಿಹಾಸಿಕ ಸ್ಮಾರಕಗಳ ಕಡೆ' ಶೈಕ್ಷಣಿಕ ಕಾರ್ಯಕ್ರಮದಡಿ ಬಿ.ಎ. ವಿದ್ಯಾರ್ಥಿಗಳು ಪಟ್ಟಣದ ಐತಿಹಾಸಿಕ ಸಿದ್ದೇಶ್ವರ ದೇವಸ್ಥಾನಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ಪಠ್ಯಪುಸ್ತಕಗಳ ಅಧ್ಯಯನದ ಜತೆಗೆ ಸ್ಥಳೀಯ ಹಾಗೂ ವಿವಿಧೆಡೆ ಇರುವ ಐತಿಹಾಸಿಕ ಸ್ಮಾರಕಗಳಿಗೆ ಭೇಟಿ ನೀಡಿದರೆ ಇತಿಹಾಸದ ಕುರಿತು ಪ್ರಾಯೋಗಿಕ ಜ್ಞಾನ ಪಡೆಯಲು ಸಾಧ್ಯವಾಗುತ್ತದೆ ಎಂದರು.

ಇತಿಹಾಸ ವಿಭಾಗದ ಮುಖ್ಯಸ್ಥ ಮಾರುತಿ ಮಾತನಾಡಿ, ಮಕ್ಕಳು ದೇಶ ಸುತ್ತಬೇಕು, ಕೋಶ ಓದ ಬೇಕು. ಆಗ ಮಾತ್ರ ಇತಿಹಾಸವನ್ನು ಸಂಪೂರ್ಣವಾಗಿ ಅರಿಯಲು ಸಾಧ್ಯ. ಮುಳಗುಂದವು ಐತಿಹಾಸಿಕ ಹಿನ್ನೆಲೆಯುಳ್ಳ ಪಟ್ಟಣವಾಗಿದ್ದು, ಸಿದ್ದೇಶ್ವರ ದೇವಸ್ಥಾನ, ಪಾರ್ಶ್ವನಾಥ ಜೈನ ಬಸದಿ, ಬಾಲಲೀಲಾ ಮಹಾಂತ ಶಿವಯೋಗಿಗಳ ದೇವಾಲಯ, ಅನ್ನದಾನೇಶ್ವರ ದೇವಸ್ಥಾನ ಸೇರಿದಂತೆ ಹಲವು ಐತಿಹಾಸಿಕ ತಾಣಗಳನ್ನು ಹೊಂದಿದೆ.

ಇಲ್ಲಿನ ವಾಸ್ತುಶಿಲ್ಪ, ಕಲೆ ಹಾಗೂ ಪ್ರಾಚೀನತೆಯನ್ನು ವಿದ್ಯಾರ್ಥಿಗಳು ಅರಿಯಬೇಕು ಎಂದರು.

ಉಪನ್ಯಾಸಕರಾದ ಎಸ್. ಮಲ್ಲೂರ, ವಿನಾಯಕ ಶಿರಬಡಿಗಿ ಸೇರಿದಂತೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

---

## ಯೋಗಾಸನ ಸ್ಪರ್ಧೆಯಲ್ಲಿ ಪ್ರಥಮ; ವಿಭಾಗ ಮಟ್ಟಕ್ಕೆ ಸಾಹಿತ್ಯಾ ಜಾಧವ ಆಯ್ಕೆ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆದ ತಾಲೂಕು ಹಾಗೂ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟ-2026ರ ಯೋಗಾಸನ ಸ್ಪರ್ಧೆಯಲ್ಲಿ ಸಿದ್ಧಲಿಂಗ ನಗರದ ಬಸವೇಶ್ವರ ಇಂಗ್ಲಿಷ್ ಮಾಧ್ಯಮ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿನಿ ಸಾಹಿತ್ಯಾ ಕೃಷ್ಣಾಜಿ ಜಾಧವ ಪ್ರಥಮ ಸ್ಥಾನ ಪಡೆದು ವಿಭಾಗ ಮಟ್ಟದ ಸ್ಪರ್ಧೆಗೆ ಆಯ್ಕೆಯಾಗಿದ್ದಾರೆ.



ಸಾಹಿತ್ಯಾ ಅವರು ಧಾರವಾಡದಲ್ಲಿ ನಡೆಯಲಿರುವ 2026-27ನೇ ಸಾಲಿನ ಬೆಳಗಾವಿ ವಿಭಾಗ ಮಟ್ಟದ ದಸರಾ ಕ್ರೀಡಾಕೂಟದಲ್ಲಿ ಗದಗ ಜಿಲ್ಲೆಯನ್ನು ಪ್ರತಿನಿಧಿಸಲಿದ್ದಾರೆ.

ವಿಭಾಗ ಮಟ್ಟದ ಸ್ಪರ್ಧೆಯಲ್ಲಿಯೂ ಉತ್ತಮ ಸಾಧನೆ ಮಾಡುವ ಮೂಲಕ ಜಿಲ್ಲೆಗೆ ಕೀರ್ತಿ ತರಲಿ ಎಂದು ಬಸವೇಶ್ವರ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯ ಶಿವಾನಂದ ಗಿಡ್ಡಕೆಂಚಣ್ಣನವರ, ದೈಹಿಕ ಶಿಕ್ಷಣ ಶಿಕ್ಷಕ ಎಸ್.ಎಂ. ಬುರಡಿ, ಗದಗ ಜಿಲ್ಲಾ ಅಮೆಚೂರ್ ಯೋಗಾಸನ ಸ್ಪೋರ್ಟ್ಸ್ ಅಸೋಸಿಯೇಶನ್ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು, ಪಾಲಕರು ಮತ್ತು ಯೋಗಾಭಿಮಾನಿಗಳು ಅಭಿನಂದಿಸಿ ಶುಭ ಹಾರೈಸಿದ್ದಾರೆ.

---

## ಎನ್‌ಎಸ್‌ಎಸ್‌ನಿಂದ ಸೇವಾ ಮನೋಭಾವ, ನಾಯಕತ್ವ ಗುಣ ವೃದ್ಧಿ



**ವಿಜಯಸಾಕ್ಷಿ ಸುದ್ದಿ, ಗದಗ**

ಯುವಜನರಲ್ಲಿ ದೇಶಪ್ರೇಮ, ಸೇವಾ ಮನೋಭಾವ, ನಾಯಕತ್ವ ಗುಣ, ಶಿಸ್ತು ಹಾಗೂ ಸಾಮಾಜಿಕ ಜವಾಬ್ದಾರಿಯನ್ನು ಬೆಳೆಸುವಲ್ಲಿ ರಾಷ್ಟ್ರೀಯ ಸೇವಾ ಯೋಜನೆ (ಎನ್‌ಎಸ್‌ಎಸ್) ಮಹತ್ವದ ಪಾತ್ರ ವಹಿಸುತ್ತಿದೆ ಎಂದು ಆದರ್ಶ ಶಿಕ್ಷಣ ಸಮಿತಿಯ ಕಾರ್ಯದರ್ಶಿ ಎ.ಡಿ. ಗೊಡಖಿಂಡಿ ಹೇಳಿದರು.

ನಗರದ ಆದರ್ಶ ಶಿಕ್ಷಣ ಸಮಿತಿಯ ಶ್ರೀ ವಿ.ಆರ್. ಕುಷ್ಟಗಿ ಮೆಮೋರಿಯಲ್ ಕಾಲೇಜ್ ಆಫ್ ಕಾಮರ್ಸ್‌ನಲ್ಲಿ ಎನ್‌ಎಸ್‌ಎಸ್ ಘಟಕ, ಗದಗ-ಬೆಟಗೇರಿ ನಗರಸಭೆ, ಡಾ. ಮೆಹರವಾಡೆ ಕಣ್ಣಿನ ಆಸ್ಪತ್ರೆ ಹಾಗೂ ಐಎಂಎ ಬ್ಲಡ್ ಬ್ಯಾಂಕ್ ಸಹಯೋಗದಲ್ಲಿ ಆಯೋಜಿಸಿದ್ದ 58ನೇ ಎನ್‌ಎಸ್‌ಎಸ್ ಸಂಸ್ಥಾಪನಾ ದಿನಾಚರಣೆ ಉದ್ಘಾಟಿಸಿ ಅವರು ಮಾತನಾಡಿದರು.ಹಿರಿಯ ವಕೀಲ ಟಿ. ಎನ್. ಬಾಂಡಿಗೆ ಮಾತನಾಡಿ, ಎನ್‌ಎಸ್‌ಎಸ್ ಘಟಕ ಸಮಾಜಮುಖಿ ಕಾರ್ಯಕ್ರ ಮಗಳನ್ನು ಆಯೋಜಿಸುತ್ತಿರುವುದು ಸಂತಸದ ಸಂಗತಿ. 'ನಾನಲ್ಲ, ನೀನು' ಎಂಬ ಧ್ಯೇಯವನ್ನು ಜೀವನ ದಲ್ಲಿ ಅಳವಡಿಸಿಕೊಂಡು ಸಮಾಜದ ಒಳಿತಿಗಾಗಿ ಕಾರ್ಯನಿರ್ವಹಿಸುವುದೇ ಎನ್‌ಎಸ್‌ಎಸ್‌ನ ನಿಜವಾದ ಉದ್ದೇಶ ಎಂದರು.

> ರಾಷ್ಟ್ರೀಯ ಸೇವಾ ಯೋಜನೆಯು 57 ವರ್ಷಗಳ ಪಯಣದಲ್ಲಿ ಅನೇಕ ರಚನಾತ್ಮಕ ಚಟುವಟಿಕೆಗಳ ಮೂಲಕ ಮೈಲುಗಲ್ಲುಗಳನ್ನು ಸಾಧಿಸಿದೆ. ಈ ಸಾಧನೆಯ ಹಿಂದೆ ಎನ್‌ಎಸ್‌ಎಸ್ ಸ್ವಯಂಸೇವಕರು, ಕಾರ್ಯಕ್ರಮಾಧಿಕಾರಿಗಳು ಹಾಗೂ ಸಂಘ-ಸಂಸ್ಥೆಗಳ ಕೊಡುಗೆ ಮಹತ್ವದ್ದಾಗಿದೆ.
>
> – ಎ.ಡಿ. ಗೊಡಖಿಂಡಿ

ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಚಾರ್ಯ ಡಾ. ವಿ.ಟಿ. ನಾಯ್ಕರ್ ಮಾತನಾಡಿ, 1969ರ ಸೆ.24ರಂದು ಎನ್‌ಎಸ್‌ಎಸ್ ಆರಂಭವಾಗಿದ್ದು, ಯುವಜನರಲ್ಲಿ ಸೇವಾ ಮನೋಭಾವ, ಸಾಮಾಜಿಕ ಜವಾಬ್ದಾರಿ ಹಾಗೂ ರಾಷ್ಟ್ರಪ್ರೇಮ ಬೆಳೆಸುವುದು ಇದರ ಮುಖ್ಯ ಉದ್ದೇಶವಾಗಿದೆ. ವಿದ್ಯಾರ್ಥಿಗಳು ವಿದ್ಯಾಭ್ಯಾಸದ ಜತೆಗೆ ಸಮಾಜದ ಸಮಸ್ಯೆಗಳನ್ನು ಅರಿತು ಪರಿಹಾರಕ್ಕಾಗಿ ಕಾರ್ಯನಿರ್ವಹಿಸಬೇಕು ಎಂದರು. ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕ ಡಾ. ವಿಭೂತಿ ಮಾತನಾಡಿ, ಸ್ವಚ್ಛತಾ ಅಭಿಯಾನ, ಪರಿಸರ ಸಂರಕ್ಷಣೆ, ಗಿಡ ನೆಡುವಿಕೆ, ರಕ್ತದಾನ, ಆರೋಗ್ಯ ಹಾಗೂ ರಸ್ತೆ ಸುರಕ್ಷತಾ ಜಾಗೃತಿ ಸೇರಿದಂತೆ ವಿವಿಧ ಚಟುವಟಿಕೆಗಳ ಮೂಲಕ ವಿದ್ಯಾರ್ಥಿಗಳಲ್ಲಿ ನಾಯಕತ್ವ, ಶಿಸ್ತು, ಸಹಕಾರ ಹಾಗೂ ಆತ್ಮವಿಶ್ವಾಸ ಬೆಳೆಸಲಾಗುತ್ತದೆ ಎಂದರು. ಕಾರ್ಯಕ್ರಮದ ಅಂಗವಾಗಿ ರಕ್ತದಾನ ಶಿಬಿರ, ವನಮಹೋತ್ಸವ, ಕಣ್ಣಿನ ತಪಾಸಣೆ, ಸ್ವಚ್ಛತಾ ಅಭಿಯಾನ, ಚಿತ್ರಕಲೆ ಹಾಗೂ ಪ್ರಬಂಧ ಸ್ಪರ್ಧೆ ಆಯೋಜಿಸಲಾಯಿತು. ಎನ್‌ಎಸ್‌ಎಸ್ ವಿಭಾಗದ ಮೂರು ಸಂಚಿಕೆಗಳನ್ನು ಬಿಡುಗಡೆ ಮಾಡಲಾಯಿತು. ರಕ್ತದಾನ ಶಿಬಿರದಲ್ಲಿ 18 ವಿದ್ಯಾರ್ಥಿಗಳು ರಕ್ತದಾನ ಮಾಡಿದರು. ಹಿರಿಯ ವೈದ್ಯಾಧಿಕಾರಿ ಡಾ. ಸುನಿಲ್ ಮೆಹರವಾಡೆ, ಐಎಂಎ ಬ್ಲಡ್ ಬ್ಯಾಂಕ್ ಸಿಬ್ಬಂದಿ, ವಿವಿಧ ಮಹಾವಿದ್ಯಾಲಯಗಳ ಶಿಕ್ಷಕರು ಹಾಗೂ ಸಿಬ್ಬಂದಿ, ವಿದ್ಯಾರ್ಥಿ ಪ್ರತಿನಿಧಿ ಭರತ್ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಎನ್‌ಎಸ್‌ಎಸ್ ಕಾರ್ಯಕ್ರಮಾಧಿಕಾರಿ ಪ್ರೊ. ಬಿ.ಪಿ. ಜೈನರ್ ಸ್ವಾಗತಿಸಿದರು.

---

## ನಾಲ್ಕು ದಿನಗಳ ಮಳೆಗೆ ಕೆರೆಗಳಿಗೆ ಜೀವಕಳೆ

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಕಳೆದ ನಾಲ್ಕು ದಿನಗಳಿಂದ ಸುರಿಯುತ್ತಿರುವ ಮಳೆಯಿಂದ ಗ್ರಾಮೀಣ ಪ್ರದೇಶದ ಜಮೀನು ಗಳಲ್ಲಿ ತೇವಾಂಶ ಹೆಚ್ಚಾಗಿದ್ದು, ಕೆರೆಗಳಿಗೆ ನೀರು ಹರಿದು ಬರುತ್ತಿದೆ. ಇದರಿಂದ ಹಿಂಗಾರಿ ಬಿತ್ತನೆಗೆ ಅನುಕೂಲಕರ ವಾತಾವರಣ ನಿರ್ಮಾಣವಾಗಿದ್ದು, ರೈತರಲ್ಲಿ ಉತ್ತಮ ನಿರೀಕ್ಷೆ ಮೂಡಿದೆ. ರವಿವಾರದಿಂದ ಬುಧವಾರದವರೆಗೆ ಸತತವಾಗಿ ಮಳೆ ಸುರಿದ ಪರಿಣಾಮ ಜಮೀನುಗಳಲ್ಲಿ ತೇವಾಂಶ ಹೆಚ್ಚಾಗಿದೆ. ನಾಲ್ಕು ದಿನಗಳ ಮಳೆಯಿಂದ ಭೂಮಿ ಸುಮಾರು ಒಂದು ಅಡಿಯಷ್ಟು ಹಸಿಯಾಗಿದ್ದು, ಇನ್ನರ್ಧ ಅಡಿ ಮಣ್ಣಿನಲ್ಲಿ ತೇವಾಂಶ ಹೆಚ್ಚಾದರೆ ಕಡಲೆ, ಗೋಧಿ ಹಾಗೂ ಜೋಳ ಸೇರಿದಂತೆ ಹಿಂಗಾರಿ ಬೆಳೆಗಳ ಬಿತ್ತನೆಗೆ ಅನುಕೂಲವಾಗಲಿದೆ ಎಂದು ರೈತರು ತಿಳಿಸಿದ್ದಾರೆ.

ಸದ್ಯದ ಮಳೆಯಿಂದ ಗ್ರಾಮದ ನಾಲ್ಕೂ ಕೆರೆಗಳಿಗೆ ನೀರು ಸಂಗ್ರಹವಾಗುತ್ತಿದ್ದು, ಇದೇ ರೀತಿಯ ಇನ್ನೆರಡು ಉತ್ತಮ ಮಳೆಯಾದರೆ ನಾಲ್ಕೂ ಕೆರೆಗಳು ಭರ್ತಿಯಾಗುವ ಸಾಧ್ಯತೆ ಇದೆ ಎಂದು ರೈತರು ಅಂದಾಜಿಸಿದ್ದಾರೆ.

ಹಸ್ತ ಮಳೆ ಚೆನ್ನಾಗಿ ಸುರಿದರೆ ರೈತನ ಹಸ್ತದ ತುಂಬ ಕಾಳು ಎಂಬ ಹಿರಿಯರ ನಂಬಿಕೆಯಂತೆ ಹಸ್ತ ಮಳೆ ಉತ್ತಮವಾಗಿ ಸುರಿದರೆ ಹಿಂಗಾರಿ ಬೆಳೆಗಳು ಉತ್ತಮ ಇಳುವರಿ ನೀಡುವ ನಿರೀಕ್ಷೆ ರೈತರಲ್ಲಿದೆ. ಮಳೆ ಮುಂದುವರಿದು ಮಣ್ಣಿನಲ್ಲಿ ಅಗತ್ಯ ತೇವಾಂಶ ಹೆಚ್ಚಾದರೆ ಹಿಂಗಾರಿ ಬಿತ್ತನೆಗೆ ಹೆಚ್ಚಿನ ಅನುಕೂಲವಾಗಲಿದೆ. ಸದ್ಯ ಸುರಿಯುತ್ತಿರುವ ಮಳೆ ರೈತರಲ್ಲಿ ಉತ್ತಮ ಭರವಸೆ ಮೂಡಿಸಿದೆ ಎಂದು ರೈತ ಬಾಳಪ್ಪ ಕಳಕೊಣ್ಣವರ ತಿಳಿಸಿದ್ದಾರೆ.



---

## ವಿಕಲಚೇತನರ 14 ಯೋಜನೆಗಳಿಗೆ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಧಾರವಾಡ**

ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಇಲಾಖೆಯ 2026-27ನೇ ಸಾಲಿನ ವಿವಿಧ ಫಲಾನುಭವಿ ಆಧಾರಿತ ಯೋಜನೆಗಳ ಸೌಲಭ್ಯ ಪಡೆಯಲು ಅರ್ಹ ವಿಕಲಚೇತನರಿಂದ ಆನ್‌ಲೈನ್ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಪ್ರತಿಭಾವಂತ ಅಂಗವಿಕಲ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ, ಶಿಶುಪಾಲನಾ ಭತ್ಯೆ, ನಿರುದ್ಯೋಗ ಭತ್ಯೆ, ಸ್ವಯಂ ಉದ್ಯೋಗಕ್ಕಾಗಿ ಆಧಾರ ಯೋಜನೆ, ವೈದ್ಯಕೀಯ ಪರಿಹಾರ ನಿಧಿ, ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪ್, ದೈಹಿಕ ವಿಕಲಚೇತನರಿಗೆ ಯಂತ್ರಚಾಲಿತ ದ್ವಿಚಕ್ರ ವಾಹನ, ಸಾಧನ ಸಲಕರಣೆ, ಹೊಲಿಗೆ ಯಂತ್ರ, ಬ್ರೈಲ್ ಕಿಟ್, ಬ್ಯಾಟರಿ ವ್ಹೀಲ್‌ಚೇರ್ ಸೇರಿದಂತೆ ವಿವಿಧ ಯೋಜನೆಗಳಿಗೆ ಅರ್ಜಿ ಸಲ್ಲಿಸಬಹುದು.

ಅರ್ಹ ಫಲಾನುಭವಿಗಳು ಅ.30ರೊಳಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ, ಅದರ ಹಾರ್ಡ್‌ಕಾಪಿ ಹಾಗೂ ಅಗತ್ಯ ದಾಖಲೆಗಳನ್ನು ಸಂಬಂಧಪಟ್ಟ ತಾಲೂಕು ಪಂಚಾಯಿತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರಿಗೆ (ಎಂ.ಆರ್.ಡಬ್ಲ್ಯೂ.) ಕಡ್ಡಾಯವಾಗಿ ಸಲ್ಲಿಸಬೇಕು.

ಹಾರ್ಡ್‌ಕಾಪಿ ಸಲ್ಲಿಸದ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಹೆಚ್ಚಿನ ಮಾಹಿತಿಗೆ ಜಿಲ್ಲಾ ಕಚೇರಿಯ 0836-2744474 ಸಂಖ್ಯೆಗೆ ಅಥವಾ ಸಂಬಂಧಪಟ್ಟ ತಾಲೂಕು ಪಂಚಾಯಿತಿಯ ಎಂ.ಆರ್.ಡಬ್ಲ್ಯೂ. ಅವರನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ತಿಳಿಸಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka